ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 83 Saturday **19-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 83 ಶನಿವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮುಂಗಾರು ಕೈಕೊಟ್ಟಿತು, ಬೋರ್‌ವೆಲ್ ಬತ್ತಿತು: ಜಗಳೂರಿನಲ್ಲಿ ನೀರಿನ ಬರದ ಛಾಯೆ

ಮುಂಗಾರು ಕೈಕೊಟ್ಟ ಪರಿಣಾಮ ಬೆಳೆ ಒಣಗುವಿಕೆ; ಅಂತರ್ಜಲ ಕುಸಿತದಿಂದ ಬೋರ್‌ವೆಲ್‌ಗಳಲ್ಲೂ ನೀರು ಖಾಲಿ

“ಮುಂಜಾನೆಯ ಮೆರಗು”

ಜಗಳೂರು, ಸೆ.18– ಮುಂಗಾರು ಮಳೆ ಸಂಪೂರ್ಣವಾಗಿ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಜಗಳೂರು ತಾಲೂಕಿನಲ್ಲಿ ಬರದ ತೀವ್ರತೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಇದೀಗ ಇದರ ಪರಿಣಾಮ ಕುಡಿಯುವ ನೀರಿನ ಮೇಲೂ ಬೀಳತೊಡಗಿದೆ. ತಾಲೂಕಿನ ಹಲವು ಗ್ರಾಮಗಳಲ್ಲಿ ಈಗಾಗಲೇ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದ್ದು, ಮುಂಜಾಗ್ರತಾ ಕ್ರಮವಾಗಿ ತಾಲೂಕು ಆಡಳಿತ ಖಾಸಗಿ ಬೋರ್‌ವೆಲ್ ಹಾಗೂ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸುವ ವ್ಯವಸ್ಥೆ ಕೈಗೊಂಡಿದೆ.

ಮಳೆ ಕೊರತೆಯಿಂದಾಗಿ ತಾಲೂಕಿನ ಬಹುತೇಕ ಭಾಗಗಳಲ್ಲಿ ಬಿತ್ತನೆ ಮಾಡಿರುವ ಬೆಳೆಗಳು ಒಣಗುತ್ತಿದ್ದು, ಸಾಲ–ಸೂಲ ಮಾಡಿ ಬಿತ್ತನೆ ಮಾಡಿದ್ದ ರೈತರು ಬೆಳೆ ಕೈಗೆ ಸಿಗದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆಗಾಗಿ ಎದುರು ನೋಡುತ್ತಿದ್ದ ರೈತರ ನಿರೀ–ಕ್ಷೆ ಹುಸಿಯಾಗಿದ್ದು, ಕೃಷಿ ಚಟುವಟಿಕೆಗಳ ಮೇಲೆ ಬರದ ಕರಾಳ ಛಾಯೆ ಆವರಿಸಿದೆ.

ತಾಲೂಕಿನ ಕೆಲ ಕೆರೆಗಳಲ್ಲಿ ನೀರು ಲಭ್ಯವಿದ್ದರೂ, ನಿರಂತರ ಮಳೆ ಕೊರತೆಯಿಂದ ಅಂತರ್ಜಲ ಮಟ್ಟ ಕುಸಿದಿರುವ ಪರಿಣಾಮ ಬೋರ್‌ವೆಲ್‌ಗಳಲ್ಲಿದ್ದ ನೀರು ಸಹ ಕಡಿಮೆಯಾಗುತ್ತಿದೆ. ಇದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಗಂಭೀರವಾಗುವ ಆತಂಕ ವ್ಯಕ್ತವಾಗಿದೆ.

40ಕ್ಕೂ ಅಧಿಕ ಗ್ರಾಮಗಳತ್ತ ಕುಡಿಯುವ ನೀರಿನ ಆತಂಕ

ಮಳೆ ಪರಿಸ್ಥಿತಿ ಇದೇ ರೀತಿ ಮುಂದುವರಿದರೆ ತಾಲೂಕಿನ ಸುಮಾರು 40ಕ್ಕೂ ಅಧಿಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ತಾಲೂಕು ಆಡಳಿತ ಈಗಾಗಲೇ ಸಮಸ್ಯೆ ಎದುರಾಗಬಹುದಾದ ಗ್ರಾಮಗಳನ್ನು ಗುರುತಿಸಿ, ಅಗತ್ಯವಿರುವ ಕಡೆ ಪರ್ಯಾಯ ನೀರಿನ ಮೂಲಗಳನ್ನು ಬಳಸಿಕೊಂಡು ನೀರು ಪೂರೈಸಲು ಸಿದ್ಧತೆ ನಡೆಸುತ್ತಿದೆ.

ಪ್ರಸ್ತುತ ತಾಲೂಕಿನ ಬಸವನಕೋಟೆ ಗ್ರಾಮದಲ್ಲಿ ಖಾಸಗಿ ಬೋರ್‌ವೆಲ್‌ನಿಂದ ನೀರು ಪಡೆದು, ಅಗತ್ಯವಿರುವ ಪ್ರದೇಶಗಳಿಗೆ ನೀರು ಒದಗಿಸುವ ಕ್ರಮ ಕೈಗೊಳ್ಳಲಾಗಿದೆ. ಇದೇ ರೀತಿ ದೊಣೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮರೇನಹಳ್ಳಿ ಗ್ರಾಮದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಮಳೆಗಾಗಿ ಎದುರು ನೋಡುತ್ತಿರುವ ಗ್ರಾಮೀಣ ಜನತೆ

ಕೃಷಿ ಹಾಗೂ ಕುಡಿಯುವ ನೀರು ಎರಡಕ್ಕೂ ಮಳೆಯೇ ಪ್ರಮುಖ ಆಧಾರವಾಗಿರುವ ಜಗಳೂರು ತಾಲೂಕಿನಲ್ಲಿ ಈ ಬಾರಿ ಮುಂಗಾರು ಕೈಕೊಟ್ಟಿರುವುದು ಗ್ರಾಮೀಣ ಜನತೆಯಲ್ಲಿ ಆತಂಕ ಮೂಡಿಸಿದೆ. ಬೇಸಿಗೆ ಇನ್ನೂ ದೂರವಿದ್ದರೂ ಈಗಲೇ ನೀರಿನ ಸಮಸ್ಯೆ ಕಾಣಿಸಿಕೊಳ್ಳುತ್ತಿರುವುದು ಮುಂದಿನ ದಿನಗಳ ಪರಿಸ್ಥಿತಿಯ ಬಗ್ಗೆ ಕಳವಳ ಮೂಡಿಸಿದೆ.



ನೀರಿನ ಲಭ್ಯತೆ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ನೀರನ್ನು ಮಿತವಾಗಿ ಬಳಸಿಕೊಳ್ಳಬೇಕಾಗಿದೆ. ಮಳೆ ಬಾರದಿದ್ದರೆ ಈಗಿರುವ ನೀರಿನ ಮೂಲಗಳ ಮೇಲಿನ ಒತ್ತಡ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ.

ಆಡಳಿತದಿಂದ ಮುಂಜಾಗ್ರತಾ ಕ್ರಮ

ತಾಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾದ ಗ್ರಾಮಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಅಗತ್ಯವಿರುವ ಗ್ರಾಮಗಳಿಗೆ ಟ್ಯಾಂಕರ್ ಅಥವಾ ಪರ್ಯಾಯ ನೀರಿನ ಮೂಲಗಳ ಮೂಲಕ ನೀರು ಪೂರೈಸಲು ತಾಲೂಕು ಆಡಳಿತ ಸಿದ್ಧತೆ ಮಾಡಿಕೊಂಡಿದೆ.

ಬರದ ಪರಿಸ್ಥಿತಿ ಮತ್ತಷ್ಟು ತೀವ್ರಗೊಳ್ಳುವ ಮುನ್ನವೇ ನೀರಿನ ಸಮಸ್ಯೆ ಎದುರಾಗುವ ಗ್ರಾಮಗಳಲ್ಲಿ ಕ್ರಮ ಕೈಗೊಳ್ಳಲು ಅಧಿಕಾರಿಗಳು ಮುಂದಾಗಿರುವುದು ಗ್ರಾಮಸ್ಥರಲ್ಲಿ ಸ್ವಲ್ಪಮಟ್ಟಿನ ನಿರಾಳತೆ ಮೂಡಿಸಿದೆ. ಆದರೆ ಶಾಶ್ವತ ಪರಿಹಾರಕ್ಕೆ ಉತ್ತಮ ಮಳೆಯ ಅಗತ್ಯವಿದೆ ಎಂಬುದು ಅಧಿಕಾರಿಗಳು ಹಾಗೂ ಗ್ರಾಮಸ್ಥರ ಅಭಿಪ್ರಾಯವಾಗಿದೆ.

50 ಗ್ರಾಮಗಳ ಮೇಲೆ ತಾಲೂಕು ಆಡಳಿತ ಕಣ್ಣು

22 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 50 ಗ್ರಾಮಗಳ ಗುರುತು

ತಾಲೂಕಿನ 22 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ಈಗಾಗಲೇ ಸುಮಾರು 50 ಗ್ರಾಮಗಳನ್ನು ಗುರುತಿಸಲಾಗಿದೆ. ಅಗತ್ಯವಿರುವ ಗ್ರಾಮಗಳಲ್ಲಿ ಪರ್ಯಾಯ ನೀರಿನ ಮೂಲಗಳನ್ನು ಬಳಸಿಕೊಂಡು ಕುಡಿಯುವ ನೀರು ಪೂರೈಸಲು ವ್ಯವಸ್ಥೆ ಮಾಡಲಾಗುವುದು. ಸಾರ್ವಜನಿಕರು ಸಹ ನೀರನ್ನು ಮಿತವಾಗಿ ಬಳಕೆ ಮಾಡಿಕೊಳ್ಳಬೇಕು.

--- ಗುರುಬಸವರಾಜ್, ತಹಶೀಲ್ದಾರ್, ಜಗಳೂರು

ಖಾಸಗಿ ಬೋರ್‌ವೆಲ್, ಟ್ಯಾಂಕರ್ ಮೂಲಕ ನೀರು

ಬಸವನಕೋಟೆ ಗ್ರಾಮದಲ್ಲಿ ಖಾಸಗಿ ಬೋರ್‌ವೆಲ್ ಮೂಲಕ ನೀರು ಪೂರೈಸುವ ವ್ಯವಸ್ಥೆ ಮಾಡಲಾಗಿದೆ. ಅದೇ ರೀತಿ ದೊಣೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮರೇನಹಳ್ಳಿ ಗ್ರಾಮದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಪ್ರಸ್ತುತ ಸಮಸ್ಯೆ ಎದುರಾಗಿರುವ ಗ್ರಾಮಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ತಾಲೂಕಿನಲ್ಲಿ ಉತ್ತಮ ಪ್ರಮಾಣದ ಮಳೆಯಾದರೆ ಮಾತ್ರ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗಲಿದೆ.

--- ಕೆಂಚಪ್ಪ, ಇ.ಓ., ತಾಲೂಕು ಪಂಚಾಯಿತಿ, ಜಗಳೂರು

ಗಣೇಶ ವಿಸರ್ಜನೆ ವೇಳೆ ಎಚ್ಚರಿಕೆ ವಹಿಸಿ
ತಹಶೀಲ್ದಾರ್ ಗುರುಬಸವರಾಜ್

“ಮುಂಜಾನೆಯ ಮೆರಗು”

ಜಗಳೂರು, ಸೆ.18– ಪಟ್ಟಣ ಸೇರಿದಂತೆ ತಾಲೂಕಿನ ಬಹುತೇಕ ಕೆರೆಗಳಲ್ಲಿ ನೀರು ಸಂಗ್ರಹವಾಗಿರುವ ಹಿನ್ನೆಲೆಯಲ್ಲಿ ಗಣೇಶ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ಸಾರ್ವಜನಿಕರು, ವಿಶೇಷವಾಗಿ ಯುವಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದ್ದಾರೆ.

ಪಟ್ಟಣದ ತಾಲೂಕು ಕಚೇರಿಯಲ್ಲಿ ಶುಕ್ರವಾರ ಪತ್ರಿಕಾ ಹೇಳಿಕೆ ನೀಡಿದ ಅವರು, ಗಣೇಶೋತ್ಸವದ ಹಿನ್ನೆಲೆಯಲ್ಲಿ ವಿವಿಧೆಡೆ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗಳನ್ನು ಕೆರೆ, ಕಲ್ಯಾಣಿ ಹಾಗೂ ಇತರೆ ಜಲಮೂಲಗಳಲ್ಲಿ ವಿಸರ್ಜನೆ ಮಾಡುವ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆ–ಯದಂತೆ ಎಚ್ಚರಿಕೆ ವಹಿಸುವುದು ಅಗತ್ಯವಾಗಿದೆ ಎಂದರು.

ಇತ್ತೀಚೆಗೆ ಉತ್ತಮ ಮಳೆಯಾಗಿರುವುದರಿಂದ ತಾಲೂಕಿನ ಹಲವು ಕೆರೆಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದೆ. ಕೆಲವು ಕೆರೆಗಳು ಆಳವಾಗಿರುವುದರಿಂದ ವಿಸರ್ಜನೆ ವೇಳೆ ನೀರಿಗೆ ಇಳಿಯುವುದು ಅಪಾಯಕಾರಿಯಾಗಬಹುದು. ಆದ್ದ–ರಿಂದ ಯುವಕರು ಸೇರಿದಂತೆ ಯಾರೂ ಈಜಲು ಅಥವಾ ಸಾಹಸ ಪ್ರದರ್ಶಿಸಲು ಮುಂದಾಗಬಾರದು ಎಂದು ಸಲಹೆ ನೀಡಿದರು.



ಗಣೇಶ ಮೂರ್ತಿ ವಿಸರ್ಜನೆಗೆ ತೆರಳುವವರು ಸುರಕ್ಷಿತ ಸ್ಥಳ ಹಾಗೂ ತಾಲೂಕು ಆಡಳಿತ ನಿಗದಿಪಡಿಸಿರುವ ವಿಸರ್ಜನಾ ಸ್ಥಳಗಳನ್ನೇ ಬಳಸಬೇಕು. ಮಕ್ಕಳನ್ನು ಕೆರೆಗಳ ಬಳಿ ಏಕಾಂಗಿಯಾಗಿ ಬಿಡದೆ, ಪೋಷಕರು ಹಾಗೂ ಆಯೋಜ–ಕರು ಹೆಚ್ಚಿನ ಜಾಗ್ರತೆ ವಹಿಸಬೇಕು ಎಂದು ಹೇಳಿದರು.

ವಿಸರ್ಜನೆ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಹಾಗೂ ತಾಲೂಕು ಆಡಳಿತದ ಸೂಚನೆಗಳನ್ನು ಪಾಲಿಸುವ ಮೂಲಕ ಗಣೇಶೋತ್ಸವವನ್ನು ಶಾಂತಿಯುತವಾಗಿ ಹಾಗೂ ಸುರಕ್ಷಿತವಾಗಿ ಆಚರಿಸಬೇಕು. ಸಾರ್ವಜನಿಕರ ಸುರಕ್ಷತೆಯೇ ಪ್ರಮುಖವಾಗಿದ್ದು, ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ತಹಶೀಲ್ದಾರ್ ಗುರುಬಸವರಾಜ್ ಮನವಿ ಮಾಡಿದರು.

ಐದನೇ ದಿನ 26 ಗಣೇಶ ಮೂರ್ತಿಗಳ ವಿಸರ್ಜನೆ



“ಮುಂಜಾನೆಯ ಮೆರಗು”

ಜಗಳೂರು ಸೆ, 18– ಜಗಳೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗಣೇಶೋತ್ಸವದ ಐದನೇ ದಿನವಾದ ಶುಕ್ರವಾರ ಪಟ್ಟಣ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಒಟ್ಟು 26 ಗಣೇಶ ಮೂರ್ತಿಗಳ ವಿಸರ್ಜನೆ ನಡೆಯಿತು ಎಂದು ಸಿಪಿಐ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪಟ್ಟಣದ ವಿವಿಧ ಬಡಾವಣೆಗಳು ಹಾಗೂ ತಾಲೂಕಿನ ಮುಷ್ಟೂರು, ಚಿಕ್ಕಮಲ್ಲನಹೊಳೆ, ಹಿರೇಮಲ್ಲನಹೊಳೆ ಸೇರಿದಂತೆ ಹಲವು ಗ್ರಾಮಗಳಲ್ಲಿ ಗಣೇಶ ಮೂರ್ತಿಗಳ ವಿಸರ್ಜನಾ ಕಾರ್ಯಕ್ರಮಗಳು ಶಾಂತಿಯುತವಾಗಿ ನಡೆದವು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿತ್ತು.

ವಿಸರ್ಜನಾ ಸ್ಥಳಗಳಲ್ಲಿ ಸಿಪಿಐ ಸಿದ್ದರಾಮಯ್ಯ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಿ, ಮೆರವಣಿಗೆ ಹಾಗೂ ವಿಸರ್ಜನಾ ಕಾರ್ಯ ಕ್ರಮಬದ್ಧವಾಗಿ ನಡೆಯುವಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿತ್ತು.

ಬರಪೀಡಿತ ತಾಲೂಕು ಘೋಷಣೆಗೆ ಆಗ್ರಹ
ಸೋಮವಾರ ಜಗಳೂರು ಬಂದ್‌ಗೆ ಕರೆ

“ಮುಂಜಾನೆಯ ಮೆರಗು”

ಜಗಳೂರು ಸೆ, 18– ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವಲ್ಲಿ ಹಾಲಿ ಶಾಸಕರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ, ಕೂಡಲೇ ಬರಪೀಡಿತ ತಾಲೂಕು ಎಂದು ಘೋಷಿಸುವಂತೆ ಒತ್ತಾಯಿಸಿ ಸೋಮವಾರ ಜಗಳೂರು ಬಂದ್‌ಗೆ ಕರೆ ನೀಡಲಾಗಿದೆ ಎಂದು ತಿಳಿಸಿದರು.

ಪಟ್ಟಣದ ಬಿಜೆಪಿ ಮಂಡಲ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

‘ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಜಗಳೂರನ್ನು ಬರಪೀಡಿತ ತಾಲೂಕು ಪಟ್ಟಿಗೆ ಸೇರ್ಪಡೆಗೊಳಿಸುವಂತೆ ನೇರವಾಗಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಕ್ರಮ ಕೈಗೊಳ್ಳುತ್ತಿದ್ದೆ. ಹಾಲಿ ಶಾಸಕರು ಕೂಡ ಇದೇ ರೀತಿಯ ಪ್ರಯತ್ನ ಮಾಡಬೇಕಿತ್ತು. ಆದರೆ ಅಗತ್ಯ ಕ್ರಮ ಕೈಗೊಳ್ಳದ ಕಾರಣ ಜಗಳೂರು ಬರಪೀಡಿತ ಪಟ್ಟಿಯಿಂದ ಹೊರಗುಳಿದಿದೆ’ ಎಂದು ಆರೋಪಿಸಿದರು.

ತಾವು ಮೂರು ಬಾರಿ ಶಾಸಕರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಸಮುದಾಯ ಭವನಗಳು, ರಸ್ತೆ, ಬಸ್ ನಿಲ್ದಾಣ, ವಸತಿ ಯೋಜನೆಯಡಿ ಮನೆಗಳು ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದಾಗಿ ತಿಳಿಸಿದರು. ಕೋರ್ಟ್ ಮುಂಭಾಗದ ರಸ್ತೆ ನಿರ್ಮಾಣಕ್ಕೆ ತಮ್ಮ ಅವಧಿಯಲ್ಲೇ ಅನುದಾನ ಮಂಜೂರಾಗಿತ್ತು. ಹಾಲಿ ಶಾಸಕರು ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆ ಅಷ್ಟೇ ಎಂದು ಹೇಳಿದರು.

‘ನನ್ನ ಅವಧಿಯಲ್ಲಿ ಯಾವುದೇ ಸರ್ವಪಕ್ಷ ನಿಯೋಗವಿಲ್ಲದೆ ನಾನೊಬ್ಬನೇ ಪ್ರಯತ್ನಿಸಿ ಜಗಳೂರನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಿದ್ದೆ’ ಎಂದು ಶಾಸಕರ ಹೇಳಿಕೆಗೆ ತಿರುಗೇಟು ನೀಡಿದರು.

ಗುಳೆ ಹೋಗುತ್ತಿರುವ ಕೂಲಿಕಾರರು

ತಾಲೂಕಿನಲ್ಲಿ ಒಟ್ಟು 54 ಸಾವಿರ ಹೆಕ್ಟೇರ್ ಕೃಷಿ ಪ್ರದೇಶವಿದ್ದು, ಸುಮಾರು 31 ಸಾವಿರ ಹೆಕ್ಟೇರ್‌ನಲ್ಲಿ ಮಾತ್ರ ಬಿತ್ತನೆ ಕಾರ್ಯ ನಡೆದಿದೆ. ಬರದ ಛಾಯೆ ತೀವ್ರವಾಗುತ್ತಿದ್ದರೂ ಜಗಳೂರನ್ನು ಎರಡು ಹಂತದ ಬರಪೀಡಿತ ಪಟ್ಟಿಗಳಿಂದಲೂ ಕೈಬಿಡಲಾಗಿದೆ ಎಂದು ರಾಮಚಂದ್ರ ಹೇಳಿದರು.

ಜಿಲ್ಲೆಯ ಹರಿಹರ ಮತ್ತು ಚನ್ನಗಿರಿ ತಾಲೂಕುಗಳಲ್ಲಿ ರೈತರ ಪಂಪ್‌ಸೆಟ್‌ಗಳಂತಹ ಅಂಶಗಳನ್ನು ಪರಿಗಣಿಸಿ ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಲಾಗಿದೆ. ಜಗಳೂರಿನಲ್ಲಿಯೂ ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಹುಚ್ಚಂಗಿಪುರ, ಉಜ್ಜಪ್ಪ ಒಡೆಯರಹಳ್ಳಿ ಸೇರಿದಂತೆ ಬಿಳಿಚೋಡು ಹೋಬಳಿಯ ಹಲವು ಗ್ರಾಮಗಳಲ್ಲಿ ಕೂಲಿಕಾರರಿಗೆ ಕೆಲಸ ದೊರೆಯದೆ ಆರ್ಥಿಕ ಸಂಕಷ್ಟ ಎದುರಾಗಿದೆ. ದುಡಿಮೆ ಅರಸಿ ಮಲೆನಾಡು ಭಾಗಗಳಿಗೆ ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಸರ್ಕಾರ ಕೂಡಲೇ ಜಗಳೂರನ್ನು ಬರಪೀಡಿತ ತಾಲೂಕು ಎಂದು ಘೋಷಿಸಬೇಕು ಎಂದು ಆಗ್ರಹಿಸಿದರು.

ಸರ್ವಪಕ್ಷ ನಿಯೋಗಕ್ಕೆ ಬೆಂಬಲ: ಎಚ್.ಪಿ.ರಾಜೇಶ್

ಮಾಜಿ ಶಾಸಕ ಎಚ್.ಪಿ.ರಾಜೇಶ್ ಮಾತನಾಡಿ, ಬರಪೀಡಿತ ತಾಲೂಕು ಘೋಷಣೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ ಸೋಮವಾರ ನಡೆಯುವ ಜಗಳೂರು ಬಂದ್‌ಗೆ ಭದ್ರಾ ಮೇಲ್ದಂಡೆ ಹೋರಾಟ ಸಮಿತಿ, ಕನ್ನಡಪರ ಸಂಘಟನೆಗಳು ಸೇರಿದಂತೆ ವಿವಿಧ ಸಂಘಟನೆಗಳು ಬೆಂಬಲ ಸೂಚಿಸಿವೆ ಎಂದರು.

ಬರ ಘೋಷಣೆಗೆ ಸಂಬಂಧಿಸಿದಂತೆ ಎನ್‌ಡಿಆರ್‌ಎಫ್ ಮಾನದಂಡಗಳು ಪ್ರಮುಖವಾಗಿದ್ದು, ಮೂರನೇ ಪಟ್ಟಿಯಲ್ಲೂ ಜಗಳೂರು ಸೇರ್ಪಡೆಯಾಗುವುದು ಕಷ್ಟಕರವಾಗಬಹುದು. ಹೀಗಾಗಿ ಸರ್ಕಾರದ ಗಮನ ಸೆಳೆಯಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

‘ಅಭಿವೃದ್ಧಿ ಕಾಮಗಾರಿಗಳಿಗೆ ನಮ್ಮ ಬೆಂಬಲವಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಅಗತ್ಯ ಅನುದಾನ ಹಾಗೂ ತಾಲೂಕಿನ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಸರ್ವಪಕ್ಷ ನಿಯೋಗ ತೆರಳಲು ನಾವು ಸಿದ್ಧರಿದ್ದೇವೆ’ ಎಂದು ತಿಳಿಸಿದರು.

ಹಾಲಿ ಶಾಸಕ ಬಿ.ದೇವೇಂದ್ರಪ್ಪ ಅವರು ಅಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮಗ್ರ ಮಾಹಿತಿ ಪಡೆದು ಬರ ಪರಿಸ್ಥಿತಿಯ ಅಧ್ಯಯನ ನಡೆಸಬೇಕು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವೇ ಅಧಿಕಾರದಲ್ಲಿರುವುದರಿಂದ ಜಗಳೂರನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಭದ್ರಾ ಮೇಲ್ದಂಡೆ ಕಾಮಗಾರಿ ಕಳಪೆ ಆರೋಪ

ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳ ಗುಣಮಟ್ಟದ ಬಗ್ಗೆಯೂ ಎಚ್.ಪಿ.ರಾಜೇಶ್ ಪ್ರಶ್ನೆ ಎತ್ತಿದರು. ಸುಮಾರು ಶೇ.30ರಷ್ಟು ಪೈಪ್‌ಲೈನ್ ಕಾಮಗಾರಿ ಕಳಪೆಯಾಗಿ ನಡೆದಿದೆ ಎಂಬ ಆರೋಪಗಳಿದ್ದು, ಈ ಕುರಿತು ಶಾಸಕರು ಧ್ವನಿ ಎತ್ತಬೇಕು ಎಂದು ಹೇಳಿದರು.

ಅಭಿವೃದ್ಧಿ ಕಾರ್ಯಗಳಿಗೆ ತಮ್ಮ ಹಾಗೂ ಪಕ್ಷದ ವತಿಯಿಂದ ಬೇಷರತ್ತಿನ ಸಹಕಾರವಿದೆ. ಶಾಸಕರು ಅಮೆರಿಕದಲ್ಲಿ ನಡೆದ ಅಕ್ಕ ಸಮ್ಮೇಳನದಲ್ಲಿ ಭಾಗವಹಿಸಿದ್ದಕ್ಕೆ ತಮ್ಮ ವಿರೋಧವಿಲ್ಲ. ತಾವು ಮತ್ತು ಎಸ್.ವಿ.ರಾಮಚಂದ್ರ ಅವರೂ ಹಿಂದೆ ಅಕ್ಕ ಸಮ್ಮೇಳನದಲ್ಲಿ ಭಾಗವಹಿಸಿರುವುದಾಗಿ ತಿಳಿಸಿದರು.

‘ಮಾತಿಗಿಂತ ಕೆಲಸ ಮುಖ್ಯ’

‘ಮತದಾರರು ಗೆಲುವಿನ ಕುದುರೆಯನ್ನು ನೀಡಿದ್ದಾರೆ. ಅದನ್ನು ಸಮರ್ಪಕವಾಗಿ ನಿಭಾಯಿಸುವ ಜವಾಬ್ದಾರಿ ಶಾಸಕರ ಮೇಲಿದೆ. ಸಮಸ್ಯೆಗಳ ಪರಿಹಾರಕ್ಕೆ ಕೆಲಸ ಮಾಡುವ ಬದಲು ಬರೀ ಮಾತನಾಡುವುದರಲ್ಲಿ ಕಾಲ ಕಳೆಯಬಾರದು’ ಎಂದು ಎಚ್.ಪಿ.ರಾಜೇಶ್ ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ

ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ಇವಿ ಕ್ರಾಂತಿ : ಹೆಚ್ಡಿಕೆ

"ಮುಂಜಾನೆಯ ಮೆರಗು"

ನವದೆಹಲಿ,ಸೆ.18– ಎಲೆಕ್ಟ್ರಿಕ್ ವಾಹನ ಕ್ಷೇತ್ರವು ಸಾಮಾಜಿಕ ಸಬಲೀಕರಣ ಮತ್ತು ಸಾಮಾಜಿಕ ಪರಿವರ್ತನೆಗೆ ಬಹುದೊಡ್ಡ ಕೊಡುಗೆ ನೀಡುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅಭಿಪ್ರಾಯಪಟ್ಟರು.ನವದೆಹಲಿಯ ವಿಜ್ಞಾನ ಭವನದಲ್ಲಿ ಬೃಹತ್ ಕೈಗಾರಿಕೆ ಸಚಿವಾಲಯ ವತಿಯಿಂದ ಹಮ್ಮಿಕೊಂಡಿದ್ದ ಸೇವಾಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಿ ಅವರು ಮಾತನಾಡಿದರು.



ಸ್ವಚ್ಛ ಸಾರಿಗೆ ನರೇಂದ್ರ ಮೋದಿ ಅವರ ಪರಿಕಲ್ಪನೆ. ಸಾಮೂಹಿಕ ಮತ್ತು ಸರಕು ಸಾಗಾಣೆ ಅಷ್ಟೇ ಅಲ್ಲದೆ ಸಾರ್ವಜನಿಕರ ವೈಯಕ್ತಿಕ ಸಾರಿಗೆ ವಿಷಯದಲ್ಲಿಯೂ ಮಾಲಿನ್ಯಮುಕ್ತ ವಾತಾವರಣ ಸೃಷ್ಟಿ ಮಾಡಬೇಕು ಎನ್ನುವುದು ಅವರ ಹೆಗ್ಗುರಿಯಾಗಿದೆ ಎಂದರು.ವಾಣಿಜ್ಯ ಸಾರಿಗೆ ವಲಯದಲ್ಲಿಯೂ ಎಲೆಕ್ಟ್ರಿಕ್ ವಾಹನಗಳಿಂದ ದೊರೆಯುತ್ತಿರುವ ಪ್ರಯೋಜನಗಳು ದೊಡ್ಡ ಪ್ರಮಾಣದಲ್ಲಿವೆ ಎಂದು ಒತ್ತಿ ಹೇಳಿದ ಸಚಿವ ಕುಮಾರಸ್ವಾಮಿ ಅವರು; ಇ-ಬಸ್ಸುಗಳು ಮತ್ತು ಇ-ಟ್ರಕ್ಗಳ ಬಳಕೆಯು ಹೆಚ್ಚು ಲಾಭದಾಯಕವಾಗಿದೆ ಮತ್ತು ಈ ಮೂಲಕ ಪರಿಸರಕ್ಕೆ ಪೂರಕವಾದ ವ್ಯವಸ್ಥೆಯು ಸೃಷ್ಟಿಯಾಗಿದೆ. ಇಂತಹ ವಾಹನಗಳ ನಿರ್ವಾಹಕರು ಹೆಚ್ಚುಹೆಚ್ಚು ಲಾಭ ಗಳಿಸುತ್ತಿದ್ದಾರೆ ಎಂದು ಹೇಳಿದರು.

2047ರ ಹೊತ್ತಿಗೆ ಭಾರತವು ಅಭಿವೃದ್ಧಿ ಹೊಂದಿದ ಭಾರತವಾಗಬೇಕು ಎಂಬುದು ನರೇಂದ್ರ ಮೋದಿಯವರ ಕನಸು. ಈ ದಿಸೆಯಲ್ಲಿ ಜಾಗತಿಕ ಸ್ಪರ್ಧೆಯ ಸವಾಲುಗಳನ್ನು ಎದುರಿಸಲು ನಾವು ಸ್ವಚ್ಛ ಸಾರಿಗೆಗೆ ಉತ್ತೇಜಿನ ನೀಡುವ ಉದ್ದೇಶದಿಂದ ಎಲೆಕ್ಟ್ರಿಕ್ ವಾಹನಗಳ ಕ್ಷೇತ್ರಕ್ಕೆ ಬಲ ತುಂಬುತ್ತಿದ್ದೇವೆ ಎಂದು ಹೇಳಿದರು.

ಪಿಎಂ ಡ್ರೈವ್ ಮತ್ತು ಎಲೆಕ್ಟ್ರಿಕ್ ಚಾರ್ಜಿಂಗ್ ಕೇಂದ್ರಗಳ ಮೂಲಸೌಕರ್ಯಗಳನ್ನು ಸೃಷ್ಟಿ ಮಾಡಲು ಈಗಾಗಲೇ 11,900 ಕೋಟಿ ರೂ. ಹಂಚಿಕೆ ಮಾಡಲಾಗಿದೆ. ಎಲೆಕ್ಟ್ರಿಕ್ ಆಂಬ್ಯುಲೆನ್ಸ್ಗಳು ಮತ್ತು ಟ್ರಕ್ಗಳ ಜತೆಗೆ ಸುಮಾರು 24 ಲಕ್ಷ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳು, 5 ಲಕ್ಷ ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳು ಮತ್ತು 14,000 ಎಲೆಕ್ಟ್ರಿಕ್ ಬಸ್ಗಳನ್ನು ಬೆಂಬಲಿಸಲು ಪಿಎಂ ಇ ಡ್ರೈವ್ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದರು.

ಚಾರ್ಜಿಂಗ್ ಮೂಲಸೌಕರ್ಯವು ಕೇಂದ್ರ ಸರಕಾರದ ಮತ್ತೊಂದು ಪ್ರಮುಖ ಭಾಗವಾಗಿದೆ. ಪೇಮ್-2 ಅಡಿಯಲ್ಲಿ ಇವಿ ಚಾರ್ಜಿಂಗ್ ಮೂಲಸೌಕರ್ಯಕ್ಕಾಗಿ 1,000 ಕೋಟಿ ರೂ. ಹಂಚಿಕೆ ಮಾಡಿದ ನಂತರ, ಸಾರ್ವಜನಿಕ ಚಾರ್ಜಿಂಗ್ ಕೇಂದ್ರಗಳಿಗೆ ಪಿಎಂ ಇ ಡ್ರೈವ್ ಅಡಿ 2,000 ಕೋಟಿ ರೂ. ಮೀಸಲಿಡಲಾಗಿದೆ ಎಂದರು.

ಜತೆಗೆ, ಸರಕಾರದ ನೀತಿ ಬೆಂಬಲವು ಬೇಡಿಕೆ ಸೃಷ್ಟಿ ಮತ್ತು ದೇಶೀಯ ಉತ್ಪಾದನೆಗೆ ಚಾರ್ಜಿಂಗ್ ಮೂಲಸೌಕರ್ಯವನ್ನು ಮೀರಿ ವಿಸ್ತರಿಸುತ್ತದೆ. 25,938 ಕೋಟಿ ರೂ. ವೆಚ್ಚದಲ್ಲಿ ಆಟೋಮೊಬೈಲ್ಗಳಿಗಾಗಿ ಉತ್ಪಾದನೆ ಪ್ರೋತ್ಸಾಹಕ ಯೋಜನೆಯು ಸುಧಾರಿತ ಆಟೋಮೋಟಿವ್ ತಂತ್ರಜ್ಞಾನಗಳ ತಯಾರಿಕೆಯನ್ನು ಉತ್ತೇಜಿಸುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದರು. ಬೃಹತ್ ಕೈಗಾರಿಕೆ ಸಚಿವಾಲಯದ ಕಾರ್ಯದರ್ಶಿ ಕಮ್ರನ್ ರಿಜ್ವಿ, ಹೆಚ್ಚುವರಿ ಕಾರ್ಯದರ್ಶಿ ಹನೀಫ್ ಖುರೇಷಿ ಸೇರಿದಂತೆ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಪೊಲೀಸ್ ಖೆಡ್ಡಾಕ್ಕೆ ಬಿದ್ದ 10 ಲಕ್ಷ ಕೊಟ್ಟರೆ ಒಂದು ಕೋಟಿ ಮಾಡುವುದಾಗಿ ವಂಚಿಸುತ್ತಿದ್ದ ಖತರ್ನಾಕ್ ಗ್ಯಾಂಗ್

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.18– ಮೂಟೆಗಳಲ್ಲಿ ಹಣದ ಕಂತುಗಳನ್ನು ತೋರಿಸಿ ಅಮಾಯಕರನ್ನು ಯಾಮಾರಿಸಿ 10 ಲಕ್ಷಕ್ಕೆ 1 ಕೋಟಿ ನೀಡುವ ಆಮಿಷವೊಡ್ಡಿ ಹಲವರಿಂದ ಹಣ ಪಡೆದು 4.5 ಕೋಟಿ ರೂ. ವಂಚಿಸಿದ್ದ ಖದೀಮರ ಖತರ್ನಾಕ್ ಗ್ಯಾಂಗ್ನ್ನು ಹೊಸಕೋಟೆ ಪೊಲೀಸರು ಖೆಡ್ಡಾಕ್ಕೆ ಕೆಡವಿದ್ದಾರೆ.

ಇದರ ಹಿಂದಿನ ಸೂತ್ರದಾರ,ಪ್ರಮುಖ ಆರೋಪಿ ಯಳಚೇನಹಳ್ಳಿ ಶಶಿಕುಮಾರ್ ಹಾಗೂ ಇನ್ನಿತರ ಆರೋಪಿಗಳಾದ ನಾಗೇಶ್, ಪ್ರಮೀಳ ಶಶಿಕುಮಾರ್, ಅಂಬುಜಾ ಶಶಿಕುಮಾರ್, ವೆಂಕಟರವಣಪ್ಪ ಎಂಬವರನ್ನು ಬಂಧಿಸಲಾಗಿದೆ. ಹೊಸಕೋಟೆ ಸುತ್ತಮುತ್ತ ಜಮೀನುಗಳನ್ನು ತೋರಿಸಿ ಹಲವರ ವಿಶ್ವಾಸ ಗಳಿಸಿದ್ದ ಆರೋಪಿ ಶಶಿಕುಮಾರ್ ಈ ಜಾಗದಲ್ಲಿ 1 ಕೋಟಿ ಬೆಲೆಬಾಳುವ ಜಮೀನನ್ನು 10 ಲಕ್ಷಕ್ಕೆ ಕೊಡಿಸುವುದಾಗಿ ರಿಯಲ್ ಎಸ್ಟೇಟ್ ಉದ್ಯಮಿಗಳು, ಸ್ಥಿತಿವಂತರನ್ನು ಬೇನಾಮಿ ಜಮೀನಿನ ಬಳಿ ಕರೆದೊಯ್ದು ನಂಬಿಕೆ ಗಳಿಸಿದ್ದ.

ಅಲ್ಲದೇ,ಪ್ರಮುಖ ಆರೋಪಿ ಶಶಿಕುಮಾರ್ ಕಳೆದ ಹಲವು ವರ್ಷಗಳಿಂದ ಸ್ನೇಹಿತರು ಮತ್ತು ಸ್ಥಳೀಯರನ್ನ ನಂಬಿಸಿದ್ದ. ಆರ್ಬಿಐ ವ್ಯಾನೇಜರ್ ಎಂದು ವ್ಯಕ್ತಿಯೊಬ್ಬನನ್ನು ಪರಿಚಯಿಸಿದ್ದನು. ತದ ನಂತರದಲ್ಲಿ ವಿಡಿಯೋ ಕಾಲ್ ಮಾಡಿ ಮೂಟೆಗಳಲ್ಲಿ ಹಣ ತೋರಿಸಿ ಜನರ ವಿಶ್ವಾಸಗಳಿದ್ದ ಈತ ಹೊಸಕೋಟೆ ಸುತ್ತಮುತ್ತ 4.5 ಕೋಟಿಗೂ ಅಧಿಕ ಹಣ ಸಂಗ್ರಹಿಸಿದ್ದ.

ತಮಗೆ ದಿ.ತಮಿಳುನಾಡು ಸಿಎಂ ಜಯಲಲಿತಾ ಬೇನಾಮಿ ಆಸ್ತಿ ಬಂದಿದೆ. 10 ಲಕ್ಷ ಕೊಟ್ಟರೆ ಒಂದು ಕೋಟಿಯಂತೆ ಹಣ ಕೊಡುವುದಾಗಿ ನಂಬಿಸಿ ಈ ಗ್ಯಾಂಗ್ ಹಲವರಿಗೆ ವಂಚನೆ ಮಾಡಿದೆ.

ಚೆಕ್, ನಗದು ಮತ್ತು ಚಿನ್ನಾಭರಣ ಪಡೆದು ವಂಚಿಸಿದ್ದ ಆರೋಪ ಸಂಬಂಧ



ಆರೋಪಿ ಶಶಿಕುಮಾರ್ ವಿರುದ್ಧ ಕಳೆದ ತಿಂಗಳು ಪ್ರಕರಣ ದಾಖಲಾಗಿತ್ತು. ಈ ಬಗ್ಗೆ ತನಿಖೆ ಕೈಗೊಂಡ ಪೊಲೀಸರುಹಲವು ಮಾಹಿತಿಗಳನ್ನು ಕಲೆಹಾಕಿ ಪ್ರಮುಖ ಆರೋಪಿಯನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ ಈತನ ಜೊತೆ ಇನ್ನೂ ಹಲವರು ಇರುವ ಬಗ್ಗೆ ಗೊತ್ತಾಗಿದೆ.

ತನಿಖೆ ಮುಂದುವರೆಸಿದ ಪೊಲೀಸರು ಉಳಿದ ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ. ಆರೋಪಿಗಳು ವಂಚಿಸಿ ಗಳಿಸಿದ್ದ ಹಣದಲ್ಲಿ ವಾಹನ, ಜಮೀನು ಖರೀದಿ ಮಾಡಿರುವುದು ವಿಚಾರಣೆಯಿಂದ ಗೊತ್ತಾಗಿದೆ.ಈ ಬಗ್ಗೆ ಬೆಂಗಳೂರು ಗ್ರಾಮಾಂತರ ಎಸ್ಪಿ ಚಂದ್ರಕಾಂತ್ ಅವರು ಮಾಹಿತಿ ನೀಡಿ, ಆರೋಪಿ ಶಶಿಕುಮಾರ್ ಸಾಕಷ್ಟು ಜನರಿಗೆ ಮೋಸ ಮಾಡಿದ್ದಾನೆ. ಕೊಟ್ಟ ಹಣ ಕೇಳಲು ಹೋದರೆ ಬೌನ್ಸರ್ಗಳ ಮೂಲಕ ಬೆದರಿಕೆ ಹಾಕುತ್ತಿದ್ದ, ಅಲ್ಲದೇ ಹಣ ಕಳೆದುಕೊಂಡವರು ಹೆಚ್ಚು ಒತ್ತಡ ಹಾಕಿದರೆ ಕೆಲ ದಲಿತ ನಾಯಕರಿಂದ ಧಮ್ಕಿ ಹಾಕಿಸುತ್ತಿದ್ದ.

ದಲಿತ ಸಂಘಟನೆ ಮುಖಂಡರಿಗೆ ಹಣ ನೀಡಿ ಅವರನ್ನ ಬಳಸಿಕೊಳ್ಳುತ್ತಿದ್ದ. ಈ ಪ್ರಕರಣದಿಂದ ತಪ್ಪಿಸಿಕೊಳ್ಳಲು ಪೊಲೀಸರಿಗೂ ಧಮ್ಕಿ ಹಾಕಿಸುತ್ತಿದ್ದನು ಎಂದು ಎಸ್ಪಿ ವಿವರಿಸಿದ್ದಾರೆ.

ಈ ಪ್ರಕರಣ ಸಂಬಂಧ ದಲಿತ ಮುಖಂಡ ನಾಗೇಶ್ ಎಂಬವರನ್ನು ಈಗಾಗಲೇ ಬಂಧಿಸಲಾಗಿದೆ. ವಂಚನೆಯಾಗಿರುವ ಮತ್ತಷ್ಟು ಜನ ದೂರು ನೀಡುವ ನಿರೀಕ್ಷೆಯಿದ್ದು, ದೂರು ಬಂದರೆ ಪಡೆದು ತನಿಖೆ ಮುಂದುವರೆಸುತ್ತೇವೆ ಎಂದು ಚಂದ್ರಕಾಂತ್ ಅವರು ತಿಳಿಸಿದ್ದಾರೆ.

ಕರಾವಳಿಯಲ್ಲಿ ಕ್ಯಾಬಿನೆಟ್ ಮೀಟಿಂಗ್

"ಮುಂಜಾನೆಯ ಮೆರಗು"

ಮಂಗಳೂರು, ಸೆ.18– ದಕ್ಷಿಣ ಕನ್ನಡ ಜಿಲ್ಲೆಯ ಹೆಸರನ್ನು ಮರುನಾಮಕರಣ ಮಾಡಲು, ಕರಾವಳಿ ಪ್ರವಾಸೋದ್ಯಮ ನೀತಿ ಹಾಗೂ ಮಂಗಳೂರಿನಲ್ಲಿ ಐಟಿ ಪಾರ್ಕ್ ನಿರ್ಮಾಣ ಸೇರಿದಂತೆ ಹಲವಾರು ಮಹತ್ವದ ಯೋಜನೆಗಳ ಕುರಿತು ಮಂಗಳೂರಿನಲ್ಲಿಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾದ ಬಳಿಕ ಕರಾವಳಿ ಭಾಗದಲ್ಲಿ ನಡೆದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಕರಾವಳಿ ಪ್ರದೇಶದ ಬಂದರು, ದ್ವೀಪ, ಪ್ರವಾಸೋದ್ಯಮ ಮತ್ತು ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡಲಾಗಿದೆ. ಮಂಗಳೂರು, ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಹಲವು ಮಹತ್ವದ ಯೋಜನೆಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಕೈಗೊಳ್ಳಲು ಅನುಮೋದನೆ ನೀಡಿದೆ.

2026ನೇ ಸಾಲಿನ ಸಚಿವ ಸಂಪುಟದ 21ನೇ ಸಭೆಯಲ್ಲಿ ಈ ಕುರಿತು ಹಲವು ಪ್ರಸ್ತಾವನೆಗಳಿಗೆ ಒಪ್ಪಿಗೆ ನೀಡಲಾಗಿದೆ. ವಿಶೇಷವಾಗಿ ಬಂದರು ಮತ್ತು ದ್ವೀಪಗಳ ಅಭಿವೃದ್ಧಿ, ಪ್ರವಾಸೋದ್ಯಮ ಮೂಲಸೌಕರ್ಯಗಳ ಹಾಗೂ ಹಡಗು ನಿರ್ಮಾಣಕ್ಕೆ ಸಂಬಂಧಿಸಿದ ಯೋಜನೆಗಳು ಗಮನ ಸೆಳೆದಿವೆ.

ಮಂಗಳೂರಿನಲ್ಲಿರುವ ಗುರುಪುರ ನದಿ ದ್ವೀಪಗಳನ್ನು ಪಿಪಿಪಿ ಮಾದರಿಯಲ್ಲಿ, ಡಿ.ಬಿ.ಎಫ್.ಒ.ಟಿ ಆಧಾರದ ಮೇಲೆ ಸುಮಾರು 125.43 ಕೋಟಿ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಉತ್ತರ ಕನ್ನಡ ಜಿಲ್ಲೆಯ ಕಾರವಾರ, ಭಟ್ಕಳ ಮತ್ತು ಹೊನ್ನಾವರ ತಾಲೂಕುಗಳ ವ್ಯಾಪ್ತಿಯಲ್ಲಿರುವ 7 ದ್ವೀಪಗಳನ್ನು ಸುಮಾರು 307.71 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಗೊಳಿಸಲು ನಿರ್ಧರಿಸಲಾಗಿದೆ.

ಮಂಗಳೂರಿನ ಲೈಟ್ಹೌಸ್ (ದೀಪಸ್ತಂಭ) ಪ್ರದೇಶದ ಸುತ್ತಮುತ್ತ ಪ್ರವಾಸೋದ್ಯಮ ಮತ್ತು ಆತಿಥ್ಯ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಯೋಜನೆಯನ್ನು 60.34 ಕೋಟಿ ರೂ. ವೆಚ್ಚದಲ್ಲಿ ಮಾಡಲಾಗುತ್ತಿದೆ.

ಪ್ರಮುಖವಾಗಿ ಉತ್ತರ ಕನ್ನಡ ಜಿಲ್ಲೆಯ ಮಂಕಿ ಬಂದರಿನಲ್ಲಿ ಬಹುಉದ್ದೇಶಿತ ಬಂದರು ಹಾಗೂ ಹಡಗು ನಿರ್ಮಾಣ ಅಂಗಳ ಅಭಿವೃದ್ಧಿಪಡಿಸುವ ಮಹತ್ವಾಕಾಂಕ್ಷಿ ಯೋಜನೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಡಿ.ಬಿ.ಎಫ್.ಒ.ಟಿ ಮಾದರಿಯ ಈ ಯೋಜನೆಯ ಅಂದಾಜು ವೆಚ್ಚ 6,925 ಕೋಟಿ ರೂಪಾಯಿ ಎಂದು ಹೇಳಲಾಗಿದೆ.

ಉಡುಪಿ ಜಿಲ್ಲೆಯ ಅಯಬಾ, ದರಿಯಾ ಬಹದ್ದೂರ್ ಗಢ ಹಾಗೂ ಮಲ್ಪೆ ದ್ವೀಪಗಳನ್ನು ಪರಿಸರ ಪ್ರವಾಸೋದ್ಯಮ ತಾಣಗಳಾಗಿ ಅಭಿವೃದ್ಧಿಪಡಿಸಲು ಅನುಮೋದನೆ ನೀಡಲಾಗಿದೆ. ಇದಕ್ಕಾಗಿ ಸುಮಾರು 279.03 ಕೋಟಿ ರೂ.ಗಳ ವೆಚ್ಚ ಅಂದಾಜಿಸಲಾಗಿದೆ.

ಕಾರವಾರ ವಿಮಾನ ನಿಲ್ದಾಣ ಅಭಿವೃದ್ಧಿ ಯೋಜನೆಯ ವೆಚ್ಚವನ್ನು 98.24 ಕೋಟಿಯಿಂದ 250.05 ಕೋಟಿ ರೂ.ಗೆ ಹೆಚ್ಚಿಸಿ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಲವು ರಸ್ತೆ ಹಾಗೂ ಸೇತುವೆ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ. ಮಂಗಳೂರು, ಮೂಡುಬಿದ್ರೆ, ಬಂಟ್ವಾಳ ಸೇರಿದಂತೆ ವಿವಿಧ ಪ್ರದೇಶಗಳ ರಸ್ತೆ ಸಂಪರ್ಕ ಸುಧಾರಣೆಗೆ ಒಟ್ಟು ಹಲವು ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ.



ಉತ್ತರ ಕನ್ನಡ ಜಿಲ್ಲೆಯ ಕರಾವಳಿ ಪ್ರದೇಶದ ಒಳನಾಡು ಜಲಸಾರಿಗೆ ಅಭಿವೃದ್ಧಿಗೆ ಸಂಬಂಧಿಸಿದಂತೆ ಕರ್ನಾಟಕದ ಒಳನಾಡು ಹಡಗುಗಳ (ದಂಡನೆ ಮತ್ತು ಮೇಲ್ಮನವಿ) ನಿಯಮಗಳು, 2026ಕ್ಕೆ ಅನುಮೋದನೆ ನೀಡುವ ಪ್ರಸ್ತಾವನೆಗೂ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಕೇಂದ್ರ ಸರ್ಕಾರದ ಯೋಜನೆಯಡಿ ರಾಜ್ಯದಲ್ಲಿ ಹೊಸದಾಗಿ ಆರಂಭಿಸಲಾಗಿರುವ ಗ್ರಾಮ ಗ್ರಂಥಾಲಯಗಳಿಗೆ ಕಂಪ್ಯೂಟರ್ ಮತ್ತು ಯುಪಿಎಸ್ ಸೇರಿದಂತೆ ಅಗತ್ಯ ಯಂತ್ರೋಪಕರಣಗಳನ್ನು ಖರೀದಿಸಿ ಒದಗಿಸಲು 57.15 ಕೋಟಿ ರೂ.ಗಳ ಅಂದಾಜು ವೆಚ್ಚದ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲೂಕಿನಲ್ಲಿ ಮಳವೂರು ಸೇರಿದಂತೆ 10 ಗ್ರಾಮಗಳಿಗೆ 11.40 ಕೋಟಿ ವೆಚ್ಚದಲ್ಲಿ, ಬಂಟ್ವಾಳ ತಾಲೂಕಿನ ಕರೋಪಾಡಿ ಮತ್ತು ಇತರೆ 79 ಜನವಸತಿಗಳಿಗೆ 12.36 ಕೋಟಿ ರೂಪಾಯಿ ವೆಚ್ಚದಲ್ಲಿ, ಸಂಗಬೆಟ್ಟು ಮತ್ತು ಇತರೆ 65 ಜನವಸತಿಗಳಿಗೆ 14.90 ಕೋಟಿ ರೂಪಾಯಿ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಎರಡು ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಒಟ್ಟಾರೆ, ಸಚಿವ ಸಂಪುಟದ ಈ ನಿರ್ಧಾರಗಳಲ್ಲಿ ಕರಾವಳಿ ಕರ್ನಾಟಕದ ಬಂದರು, ದ್ವೀಪ, ಪ್ರವಾಸೋದ್ಯಮ, ವಿಮಾನ ನಿಲ್ದಾಣ, ರಸ್ತೆ ಸಂಪರ್ಕ ಹಾಗೂ ಕುಡಿಯುವ ನೀರಿನ ಮೂಲಸೌಕರ್ಯಕ್ಕೆ ಸಂಬಂಧಿಸಿದ ಹಲವು ಯೋಜನೆಗಳಿಗೆ ಆದ್ಯತೆ ನೀಡಲಾಗಿದೆ.

ಹೆಸರು ಉಳಿಯುವಂತಹ ಕೆಲಸ ಮಾಡಬೇಕು: ತೋಟಗಂಟಿ ಪ್ರಕಾಶ್

"ಮುಂಜಾನೆಯ ಮೆರಗು"

ಜಗಳೂರು, ಸೆ.18– ಮನುಷ್ಯನ ಉಸಿರು ನಿಂತ ನಂತರವೂ ಸಮಾಜದಲ್ಲಿ ಹೆಸರು ಉಳಿಯುವಂತಹ ಉತ್ತಮ ಕೆಲಸಗಳನ್ನು ಪ್ರತಿಯೊಬ್ಬರೂ ಮಾಡಬೇಕು ಎಂದು ಇರಮಲ್ಲನಹೊಳೆ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ತೋಟಗಂಟಿ ಪ್ರಕಾಶ್ ಹೇಳಿದರು.

ತಾಲೂಕಿನ ಇರಮಲ್ಲನಹೊಳೆ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ಸಹಾಯಕ ಶಿಕ್ಷಕ ನಾಗೇಂದ್ರಪ್ಪ ಅವರ ಪುತ್ರಿ ಎನ್. ಎನ್. ಚಾರ್ವಿತ್ ಅವರ ಜನ್ಮದಿನದ ಅಂಗವಾಗಿ 10ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ನೋಟ್ಬುಕ್ಗಳನ್ನು ವಿತರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೆರವಾಗುವ ಉದ್ದೇಶದಿಂದ



ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಿರುವುದು ಶ್ಲಾಘನೀಯ. ಇಂತಹ ಸೇವಾ ಮನೋಭಾವದ ಕಾರ್ಯಗಳು ಸಮಾಜದಲ್ಲಿ ಉತ್ತಮ ಸಂದೇಶವನ್ನು ನೀಡುತ್ತವೆ. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಮಾನವೀಯ ಮೌಲ್ಯಗಳು, ಸೇವಾ ಮನೋಭಾವ ಹಾಗೂ ಸಮಾಜದ ಬಗ್ಗೆ ಕಾಳಜಿಯನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜನ್ಮದಿನ ಸೇರಿದಂತೆ ವಿಶೇಷ ಸಂದರ್ಭಗಳನ್ನು ಕೇವಲ ಸಂಭ್ರಮಕ್ಕೆ ಸೀಮಿತಗೊಳಿಸದೆ, ಅಗತ್ಯವಿರುವವರಿಗೆ ನೆರವು ನೀಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸುವ ಪರಿಪಾಠ ಬೆಳೆಸಿಕೊಳ್ಳಬೇಕು. ಇಂತಹ ಕಾರ್ಯಗಳಿಂದ ಇತರರಿಗೂ ಪ್ರೇರಣೆ ದೊರೆಯುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಪ್ರಶಾಂತ್ ಸ್ವಾಮಿ, ಕಲ್ಲಿನಾಥ್, ದಾಕ್ಷಾಯಿಣಿ, ಆನಂದ್ ರಾವ್, ಮಂಜುನಾಥ್, ಮಹೇಶ್ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಅ. 4 ರಂದು ಮಾಜಿ ಸೈನಿಕರ ರ್ಯಾಲಿ

"ಮುಂಜಾನೆಯ ಮೆರಗು"

ದಾವಣಗೆರೆ, ಸೆ, 18– ಮಾಜಿ ಸೈನಿಕರು ಮತ್ತು ಅವಲಂಬಿತರು ಹಾಗೂ ವೀರನಾರಿಯರುಗಳ ಕುಂದು ಕೊರತೆಗಳನ್ನು ಆಲಿಸುವ ಸಲುವಾಗಿ ಹಾಗೂ ಮಾಜಿ ಸೈನಿಕರುಗಳಿಗೆ ಸಂಬಂಧಿತ ಇತರೆ ಸೇವೆಗಳನ್ನೊಳಗೊಂಡ ಕಾರ್ಯಾಗಾರವನ್ನು ಅಕ್ಟೋಬರ್ 4 ರಂದು ಮರಾಠ ಲೈ ರೆಜಿಮೆಂಟಲ್ ಸೆಂಟರ್, ಬೆಳಗಾವಿ ಇಲ್ಲಿ ಮಾಜಿ ಸೈನಿಕರ ರ್ಯಾಲಿಯನ್ನು ಆಯೋಜಿಸಲಾಗಿದೆ.

ಈ ರ್ಯಾಲಿಯಲ್ಲಿ ಹಲವು ರೆಜಿಮೆಂಟ್ ಅಭಿಲೇಖಾಲಯದ ಪ್ರತಿನಿಧಿಗಳು ಹಾಗೂ ಮಾಜಿ ಸೈನಿಕರುಗಳಿಗೆ ಸಂಬಂಧಿತ ಆರೋಗ್ಯ, ಬ್ಯಾಂಕಿಂಗ್, ಕ್ಯಾಂಟೀನ್, ಕಾನೂನು ಸೇವೆ, ಸ್ಪರ್ಶ್ ಇತ್ಯಾದಿ ಸೇವೆಗಳ ಪ್ರತಿನಿಧಿಗಳು ಉಪಸ್ಥಿತರಿರಲಿದ್ದು, ಆಸಕ್ತ ಮಾಜಿ ಸೈನಿಕರು ಮತ್ತು ಅವಲಂಬಿತರು ಹಾಗ

ಸೆಪ್ಟೆಂಬರ್ 19 ರಂದು ಜಿಲ್ಲಾದ್ಯಂತ ತಾಲ್ಲೂಕು ಹಾಗೂ ಹೋಬಳಿ ಮಟ್ಟದ 'ಪ್ರಜಾಸೇವಾ ಆಂದೋಲನ ಸಭೆ'



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 18– ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಅವುಗಳಿಗೆ ಸಕಾಲದಲ್ಲಿ ಸೂಕ್ತ ಪರಿಹಾರ ನೀಡುವ ಪ್ರಜಾಸೇವೆ ಆಂದೋಲನ ಕಾರ್ಯಕ್ರಮವನ್ನು ದಾವಣಗೆರೆ ಜಿಲ್ಲೆಯ ವಿವಿಧ ತಾಲ್ಲೂಕು ಮತ್ತು ಹೋಬಳಿ ಮಟ್ಟಗಳಲ್ಲಿ ಸೆಪ್ಟೆಂಬರ್ 19 ರಂದು ಆಯೋಜಿಸಲಾಗಿದೆ.

ತಾಲ್ಲೂಕು ಮಟ್ಟದ ಕಾರ್ಯಕ್ರಮ: ದಾವಣಗೆರೆ ತಾಲ್ಲೂಕು ಜರೀಕಟ್ಟೆ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಆವರಣದಲ್ಲಿ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮರ್ಥ್ ಶಾಮನೂರು ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಹೋಬಳಿ ಮಟ್ಟದ ಸಭೆಗಳು ವಿವರ: ಹೊನ್ನಾಳಿ ತಾಲ್ಲೂಕು ಸಾಸ್ವೆಹಳ್ಳಿ ಸೌಭಾಗ್ಯಕಲ್ಯಾಣ ಮಂಟಪದಲ್ಲಿ ಹಾಗೂ ನ್ಯಾಮತಿಯ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಹೊನ್ನಾಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಿ.ಜಿ.ಶಾಂತನಗೌಡರವರ ಅಧ್ಯಕ್ಷತೆಯಲ್ಲಿ ನಡೆಯಲಿದೆ, ಚನ್ನಗಿರಿ ಪುರಸಭಾಕಚೇರಿ ಒಳಾಂಗಣದಲ್ಲಿ ಹೊನ್ನಾಳಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತು ಹರಿಹರ ತಾಲ್ಲೂಕು ಕಚೇರಿಯಲ್ಲಿ ದಾವಣಗೆರೆ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪ್ರಜಾಸೇವೆ ಆಂದೋಲನ ಸಭೆಗಳು ನಡೆಯಲಿವೆ ಎಂದು ಜಿಲ್ಲಾಧಿಕಾರಿ ಜಿ. ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

"14 ವರ್ಷಗಳಿಂದ ಕರಾವಳಿಯಲ್ಲಿ ಹೆಚ್ಚು ಬಿಜೆಪಿ ಶಾಸಕರೇ ಗೆದ್ದಿದ್ದರೂ ಅಭಿವೃದ್ಧಿ ಏಕೆ ಸಾಧ್ಯವಾಗಿಲ್ಲ..?"



"ಮುಂಜಾನೆಯ ಮೆರಗು"

ಮಂಗಳೂರು, ಸೆ.18– ಕಳೆದ 14 ವರ್ಷಗಳಿಂದಲೂ ಬಿಜೆಪಿಯ ಹೆಚ್ಚು ಜನ ಶಾಸಕರು ಗೆಲ್ಲುತ್ತಿದ್ದಾರೆ. ಆದರೂ ಕರಾವಳಿಯಲ್ಲಿ ಸಮಗ್ರ ಅಭಿವೃದ್ಧಿ ಏಕೆ ಸಾಧ್ಯವಾಗಿಲ್ಲ ಎಂದು ಅಬಕಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಪ್ರಶ್ನಿಸಿದ್ದಾರೆ.

ತಮ್ಮ ವಿಡಿಯೋ ಸಂದೇಶದಲ್ಲಿ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಕರಾವಳಿ ಕರ್ನಾಟಕದ ಮಂಗಳೂರಿನ ಪ್ರಜಾ ಸೌಧದಲ್ಲಿ ಕರ್ನಾಟಕ ಸಚಿವ ಸಂಪುಟ ಸಭೆ ಇದೇ ಮೊದಲ ಬಾರಿಗೆ ನಡೆದಿದೆ. ಇದು ಕೇವಲ ಸ್ಥಳ ಬದಲಾವಣೆಯಲ್ಲ, ಇದು ನಮ್ಮ ಆರ್ಥಿಕ ದಿಕ್ಕನ್ನು ಸೂಚಿಸುವ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದಿದ್ದಾರೆ.

ಕರಾವಳಿ ಮತ್ತು ಮಲೆನಾಡು ಪ್ರದೇಶಗಳ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಸಮಗ್ರ ಕರಾವಳಿ-ಮಲೆನಾಡು ಪ್ರವಾಸೋದ್ಯಮ ನೀತಿ 2026 ಅನ್ನು ರೂಪಿಸುತ್ತಿದ್ದೇವೆ. ಬಿಜೆಪಿಯು ಮಂಗಳೂರನ್ನು ವಿಭಜಿಸಲು ಅವಕಾಶ ಹುಡುಕುತ್ತಿರುವ ಈ ಸಮಯದಲ್ಲಿ, ನಾವು ಮಂಗಳೂರು ಬೆಳೆಯಲು, ಸಮೃದ್ಧವಾಗಲು ಮತ್ತು ಕರ್ನಾಟಕವನ್ನು ಮುನ್ನಡೆಸುವ ನಗರವನ್ನಾಗಿಸಲು ಅವಕಾಶಗಳನ್ನು ಸೃಷ್ಟಿಸುತ್ತಿದ್ದೇವೆ ಎಂದರು.

ಸಿಟೀಸ್ ಇಂಡೆಕ್ಸ್ 2026ರಲ್ಲಿ ಮಂಗಳೂರು ಅಗ್ರಸ್ಥಾನ ಪಡೆದ ನಗರವಾಗಿ ಹೊರಹೊಮ್ಮಿದೆ. ಮಂಗಳೂರು ಭಾರತದ ಅತ್ಯಂತ ಭರವಸೆಯುಳ್ಳ ನಾನ್-ಮೆಟ್ರೋ ನಗರವಾಗಿದೆ. ನಾವು ಇದನ್ನು ಇನ್ನಷ್ಟು ಉತ್ತಮಪಡಿಸಬೇಕು ಮತ್ತು ಮಂಗಳೂರಿನಲ್ಲಿ ಹೊಸ ಮೆಟ್ರೋ ಸಿಟಿಯನ್ನು ನಿರ್ಮಿಸಬೇಕು ಎಂಬ ಗುರಿಯಿದೆ ಎಂದರು.

ಮಂಗಳೂರಿಗೆ ಅಗ್ರ ಸ್ಥಾನ ಕಲ್ಪಿಸುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಿಯಾಂಡ್ ಬೆಂಗಳೂರು ಕನಸಿಗೆ ಈ ಸಂಪುಟ ಸಭೆ ಮುನ್ನುಡಿಯಾಗಿದೆ. ಇಷ್ಟು ದೊಡ್ಡ ರಾಜ್ಯಕ್ಕೆ ಒಂದಕ್ಕಿಂತ ಹೆಚ್ಚು ಎಂಜಿನ್‌ಗಳ (ಅಭಿವೃದ್ಧಿ ಕೇಂದ್ರಗಳ) ಅಗತ್ಯವಿದೆ. ವಾಯು, ರಸ್ತೆ, ರೈಲು ಮತ್ತು ಸಮುದ್ರ ಸಂಪರ್ಕ, ಬಂದರು, ವಿಶ್ವವಿದ್ಯಾನಿಲಯ, ಆರೋಗ್ಯ ಮತ್ತು ಶಿಕ್ಷಣದ ಭದ್ರ ಬುನಾದಿ ಹಾಗೂ ಈಗ ರಾಷ್ಟ್ರೀಯ ಮಟ್ಟದ ಶ್ರೇಯಾಂಕವನ್ನು ಹೊಂದಿರುವ ಮಂಗಳೂರು, ರಾಜ್ಯವನ್ನು ಮುನ್ನಡೆಸುವ ಮತ್ತೊಂದು ಪ್ರಮುಖ ಶಕ್ತಿಯಾಗಬಲ್ಲದು ಎಂಬುದು ಸ್ಪಷ್ಟ ಎಂದರು.

ಕರಾವಳಿ ಪ್ರದೇಶವು ಇಂದು ನಿರೀಕ್ಷೆಯಂತೆ ತನ್ನ ಅರ್ಹತೆಗೆ ತಕ್ಕಂತಹ ಸ್ಥಾನಮಾನವನ್ನು ಪಡೆದಿದೆ. ಇಂದಿನ ಸಚಿವ ಸಂಪುಟ ಸಭೆಯು ಕರಾವಳಿ ಕರ್ನಾಟಕದ ವಿಷಯಗಳ ಕುರಿತು ನಿರ್ಧಾರ ಕೈಗೊಳ್ಳುವ ಉದ್ದೇಶವನ್ನು ಹೊಂದಿದೆ. ಮಂಗಳೂರಿನಂತಹ ನಗರಗಳ ಬೆಳವಣಿಗೆಗೆ ಉತ್ತೇಜನ ನೀಡುವ ಮೂಲಕ ನಾವು ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಮನ್ನಣೆ ನೀಡುತ್ತಿದ್ದೇವೆ ಎಂದು ಸಮರ್ಥಿಸಿಕೊಂಡರು.

ಸಮಾಜದಲ್ಲಿ ಮತ್ತು ಜನರ ಮನಸ್ಸಿನಲ್ಲಿ ಗೊಂದಲ ಮೂಡಿಸುವ ಮೂಲಕ ಬಿಜೆಪಿಯು ತನ್ನ ಸಮಯವನ್ನು ವ್ಯರ್ಥ ಮಾಡಲಿ, ಆದರೆ ನಾವು ಮಾತ್ರ ಕರಾವಳಿ ಕರ್ನಾಟಕದ ಜನರ ಅಭಿವೃದ್ಧಿ ಮತ್ತು ಪ್ರಗತಿಯತ್ತ ಗಮನಹರಿಸುತ್ತೇವೆ. ವಿಮಾನ ನಿಲ್ದಾಣ ವಿಸ್ತರಣೆ, ತುಳು ಭಾಷೆಯನ್ನು ಸಂವಿಧಾನದ ಎಂಟನೇ ಪರಿಚ್ಛೇದಕ್ಕೆ ಸೇರ್ಪಡೆಗೊಳಿಸುವುದು ಮತ್ತು ಕರ್ನಾಟಕದ ಮಧ್ಯಭಾಗದೊಂದಿಗೆ ಸಂಪರ್ಕ ಹೆಚ್ಚಿಸಲು ಕೊಂಕಣ ರೈಲ್ವೆಯನ್ನು ಸುಧಾರಿಸುವುದು ಮುಂತಾದ ಬೇಡಿಕೆಗಳ ಬಗ್ಗೆ ಕೇಂದ್ರ ಮಟ್ಟದಲ್ಲಿ ಬಿಜೆಪಿ ಸಂಸದರು ಚರ್ಚಿಸದಿರುವುದು ದುರದೃಷ್ಟಕರ ಎಂದರು.

ಸಂಪುಟ ಸಭೆಗೂ ಮುನ್ನ ಕದ್ರಿ ಮಂಜುನಾಥ ದೇವಸ್ಥಾನಕ್ಕೆ ಭೇಟಿ ನೀಡಿದ ಸಚಿವರು ವಿಶೇಷ ಪೂಜೆ ಸಲ್ಲಿಸಿದರು. ರಾಜ್ಯದಲ್ಲಿ ಉತ್ತಮ ಮಳೆ, ಬೆಳೆಯಾಗಲಿ, ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು.ಅವರಿಗೆ ಕರಾವಳಿಯು ಜನರನ್ನು ವಿಭಜಿಸುವ ವೇದಿಕೆಯಾದರೆ, ನಮಗೆ ಅದು ಅಭಿವೃದ್ಧಿಯ ಎಂಜಿನ್ ಆಗಿದೆ ಎಂದು ಪ್ರತಿಪಾದಿಸಿದರು.ಸಚಿವ ಸಂಪುಟ ಸಭೆಯ ಹಿಂದೆ ರಾಜಕೀಯ ಉದ್ದೇಶಗಳಿಲ್ಲ ಎಂದು ಸ್ಪಷ್ಟ ಪಡಿಸಿದರು.

ಯಾವ ಪಕ್ಷದವರೂ ಆತಂಕ ಪಡುವ ಅಗತ್ಯವಿಲ್ಲ: ಸಿಎಂ ಡಿ.ಕೆ.ಶಿವಕುಮಾರ್



"ಮುಂಜಾನೆಯ ಮೆರಗು"

ಮಂಗಳೂರು, ಸೆ.18– ನಮಗೆ ರಾಜಕೀಯಕ್ಕಿಂತ ಜನರ ಬದುಕು ಮುಖ್ಯ. ಯಾವುದೇ ಪಕ್ಷದ ನಾಯಕರು ಗಾಬರಿಯಾಗುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.ಮಂಗಳೂರಿನ ಸರ್ಕಿಟ್ ಹೌಸ್ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಜನರ ಬದುಕಿನ ಮೇಲೆ ರಾಜಕಾರಣ ಮಾಡುತ್ತೇವೆಯೇ ಹೊರತು, ಜನರ ಭಾವನೆಗಳ ಮೇಲೆ ರಾಜಕೀಯ ಮಾಡುವುದಿಲ್ಲ. ಎಲ್ಲರ ಚಿಂತನೆಯಂತೆ ನಮ್ಮ ಸರ್ಕಾರ ಕೆಲಸ ಮಾಡಲಿದೆ ಎಂದು ಭರವಸೆ ನೀಡಿದರು.

ಗಾಂಧೀಜಿ ಅವರು ಉಳಿದುಕೊಂಡಿದ್ದ ಮನೆಗೆ ತೆರಳಿ ಅಲ್ಲಿ ಉಪಾಹಾರ ಸೇವಿಸಿದೆ. ಮಂಗಳೂರು ಬನ್ಸ್, ದೋಸೆ ಸವಿದಿದ್ದೇನೆ. ಜಿಲ್ಲಾ ಸಚಿವರು ಎಲ್ಲಿಗೆ ಕರೆದುಕೊಂಡು ಹೋಗುತ್ತಾರೋ ಅಲ್ಲಿಗೆಲ್ಲಾ ಹೋಗುತ್ತೇನೆ ಎಂದು ಹೇಳಿದರು.

ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ನಡೆಸುತ್ತಿರುವುದರಿಂದ ಕರಾವಳಿ ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಲಾಭವಾಗಲಿದೆ ಎಂಬ ವ್ಯಾಖ್ಯಾನಗಳು ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ನಿನ್ನೆ ಮುಖ್ಯಮಂತ್ರಿ ಅವರ ಔತಣಕೂಟವನ್ನು ಬಿಜೆಪಿ ಬಹಿಷ್ಕರಿಸಿತ್ತು.

ಈ ಹಿನ್ನೆಲೆಯಲ್ಲಿ ಇಂದು ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ, ಯಾರೂ ಆತಂಕ ಪಡುವ ಅಗತ್ಯವಿಲ್ಲ. ನಾವು ಭಾವನೆಗಳ ಮೇಲೆ ರಾಜಕಾರಣ ಮಾಡುವುದಿಲ್ಲ, ಜನರ ಬದುಕಿನ ಮೇಲೆ ರಾಜಕಾರಣ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು. ಕರಾವಳಿ ಮತ್ತು ಮಲೆನಾಡು ಭಾಗದಲ್ಲಿ ಭಾವನಾತ್ಮಕ ರಾಜಕಾರಣ ಹೆಚ್ಚಾಗಿದೆ. ಕೋಮು ಸಂಘರ್ಷಗಳೇ ಬಿಜೆಪಿಯ ಮತ ಬ್ಯಾಂಕ್ ಅನ್ನು ಭದ್ರಗೊಳಿಸಿವೆ ಎಂಬ ಅಭಿಪ್ರಾಯವೂ ಇದೆ.

ಡಿಕೆಶಿ ಸಿಎಂ ಆದ ಮಾತ್ರಕ್ಕೆ ಒಕ್ಕಲಿಗರು ಕಾಂಗ್ರೆಸ್ಗೆ ವೋಟ್ ಹಾಕಲ್ಲ : ಕೆ.ಎನ್.ರಾಜಣ್ಣ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.18– ಸಚಿವ ಸಂಪುಟದಿಂದ ವಜಾಗೊಂಡು ಮಾಜಿ ಆಗಿರುವ ಮಧುಗಿರಿ ಕ್ಷೇತ್ರದ ಶಾಸಕ ಕೆ.ಎನ್.ರಾಜಣ್ಣ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಕೈ ತಪ್ಪಿದ ಬಳಿಕ ಮತ್ತೆ ವಿವಾದಾತ್ಮಕ ಹೇಳಿಕೆಗಳ ಬೆನ್ನು ಹತ್ತಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗಿದ್ದಾರೆ ಎಂಬ ಕಾರಣಕ್ಕೆ ಒಕ್ಕಲಿಗರೆಲ್ಲರೂ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವುದಿಲ್ಲ ಎಂದು ಹೇಳಿರುವುದು ರಾಜಕಾರಣದಲ್ಲಿ ಹಲ್ ಚಲ್ ಎಬ್ಬಿಸಿದೆ.

ಒಕ್ಕಲಿಗರು ದೇವೇಗೌಡರನ್ನು ನೋಡಿ ಮತ ಹಾಕುತ್ತಾರೆ, ಡಿ.ಕೆ. ಶಿವಕುಮಾರ್ ಅವರನ್ನು ನೋಡಿ ಅಲ್ಲ ಎಂದು ರಾಜಣ್ಣ ಹೇಳಿದ್ದಾರೆ. ನಮ ಸಮುದಾಯದವರು ಮುಖ್ಯಮಂತ್ರಿ ಆಗಿದ್ದಾರೆ ಎಂಬ ಕಾರಣಕ್ಕೆ ಡಿ.ಕೆ.ಶಿವಕುಮಾರ್ ಮೂಲಕ ಕಾಂಗ್ರೆಸ್‌ಗೆ ಶೇ.5ರಷ್ಟು ಹೆಚ್ಚು ಮತ ಬರಬಹುದು ಎಂದಿದ್ದಾರೆ.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಹಿಂದ ವರ್ಗದ ಮತಗಳನ್ನು ಕಾಂಗ್ರೆಸ್ ಗೆ ಸೆಳೆಯುವ ಸಾಮರ್ಥ್ಯ ಹೊಂದಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಮ ಸಮುದಾಯದ ಮತಗಳನ್ನು ಬಿಜೆಪಿಗೆ ಸೆಳೆಯಬಲ್ಲ ನಾಯಕರಾಗಿದ್ದಾರೆ ಎಂದು ರಾಜಣ್ಣ ಹೇಳಿದ್ದಾರೆ.

ಸಿದ್ದರಾಮಯ್ಯ ದುರ್ಬಲರಾದರೆ ಕಾಂಗ್ರೆಸ್ ಪಕ್ಷವೇ ದುರ್ಬಲವಾಗುತ್ತದೆ ಎಂದು ಪ್ರತಿಪಾದಿಸಿರುವ ಅವರು, ನಾನು ಕೆಲ ನಿಷ್ಠುರ ವಿಚಾರಗಳನ್ನು ನೇರವಾಗಿ ಹೇಳುತ್ತೇನೆ. ಅವುಗಳನ್ನು ಸಹಿಸಿಕೊಳ್ಳಲು ಕೆಲವರಿಗೆ ಸಾಧ್ಯವಾಗುವುದಿಲ್ಲ. ಬೆಂಗಳೂರಿನಲ್ಲಿ ಕುಳಿತಿರುವ ಕೆಲವರು ನನ್ನ ವಿರುದ್ಧ ಷಡ್ಯಂತ್ರ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಇದೇ ವೇಳೆ ಜೆಡಿಎಸ್ ಪಕ್ಷ ಸೇರುವ ಸಾಧ್ಯತೆಯನ್ನು ಸಂಪೂರ್ಣವಾಗಿ ತಳ್ಳಿಹಾಕದ ರಾಜಣ್ಣ, ಕ್ಷೇತ್ರ ಪುನರ್ವಿಂಗಡಣೆ ಸೇರಿದಂತೆ ಮುಂದಿನ ರಾಜಕೀಯ ಬೆಳವಣಿಗೆಗಳನ್ನು ಗಮನಿಸಿ ತಮ ಮುಂದಿನ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಸದ್ಯಕ್ಕೆ ಕಾಂಗ್ರೆಸ್ ಪಕ್ಷದಲ್ಲೇ ಮುಂದುವರಿಯಬೇಕು ಎಂಬ ಮನಸ್ಥಿತಿಯಲ್ಲಿದ್ದೇನೆ. ಪರಿಶಿಷ್ಟ ಪಂಗಡಕ್ಕೆ ಸೇರಿದ ನನಗೆ ಕಾಂಗ್ರೆಸ್ ಪಕ್ಷ ಸಾಮಾನ್ಯ ಕ್ಷೇತ್ರದಲ್ಲಿ ಸ್ಪರ್ಧಿಸಲು ಬಿ-ಫಾರಂ ನೀಡಿದೆ.ಈ ಹಿಂದೆ ಜೆಡಿಎಸ್ ಪಕ್ಷ ಕೂಡ ಒಮೆ ಟಿಕೆಟ್ ನೀಡಿತ್ತು. ಕಾಂಗ್ರೆಸ್ ಪಕ್ಷ ನನಗೆ ಶಾಸಕ, ಸಚಿವ ಸ್ಥಾನ ಎಲ್ಲವನ್ನೂ ನೀಡಿದೆ. ಧ್ವನಿ ಇಲ್ಲದವರಿಗೆ ಕಾಂಗ್ರೆಸ್ ಪಕ್ಷದಲ್ಲಿ ಮಾತ್ರ ಅವಕಾಶಗಳಿವೆ ಎಂದು ಕೆ.ಎನ್. ರಾಜಣ್ಣ ಹೇಳಿದ್ದಾರೆ.

ದೇಶದೆಲ್ಲೆಡೆ ಮುಂಗಾರು ಕುಸಿತ, ಆಹಾರ ಪದಾರ್ಥಗ ಬೆಲೆ ಏರಿಕೆ ಸಾಧ್ಯತೆ



"ಮುಂಜಾನೆಯ ಮೆರಗು"

ನವದೆಹಲಿ, ಸೆ.18– ಎಲ್ ನಿನೊ ಪರಿಣಾಮ ದೇಶದಲ್ಲಿ ಕಳೆದ 17 ವರ್ಷಗಳಲ್ಲಿಯೇ ಅತ್ಯಂತ ಕಡಿಮೆ ಮಳೆಯಾಗಿದೆ. ಹೀಗಾಗಿ ಭಾರತದ ಮುಂಗಾರು ಮಳೆಯು ಸರಾಸರಿಗಿಂತ 15% ಕಡಿಮೆಯಿದ್ದು, 2009ರ ನಂತರದ ಅತ್ಯಂತ ಕಡಿಮೆ ಮಳೆಯಾಗುವ ಅಪಾಯವನ್ನು ಎದುರಿಸುತ್ತಿದೆ.

ಬಲಗೊಳ್ಳುತ್ತಿರುವ ಎಲ್ ನಿನೊ ಮಳೆಯನ್ನು ತಡೆಯುತ್ತಿರುವುದರಿಂದ, ಭಾರತವು ಕಳೆದ 17 ವರ್ಷಗಳಲ್ಲಿಯೇ ಅತ್ಯಂತ ಕಡಿಮೆ ಮಳೆಯಾಗುವ ಮುಂಗಾರು ಹಾದಿಯಲ್ಲಿದೆ. ಇದು ಬೆಳೆ ಇಳುವರಿಯ ಮೇಲೆ ಪರಿಣಾಮ ಬೀರಬಹುದು ಮತ್ತು ಆಹಾರ ಪದಾರ್ಥಗಳ ಬೆಲೆ ಏರಿಕೆಯ ಅಪಾಯವನ್ನು ಹೆಚ್ಚಿಸಬಹುದು.

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ, ಜೂನ್‌ನಿಂದ ಸೆಪ್ಟೆಂಬರ್ ಅವಧಿಯ ಮುಂಗಾರು ಮಳೆಗಾಲದಲ್ಲಿ ಇಲ್ಲಿಯವರೆಗಿನ ಒಟ್ಟು ಮಳೆಯ ಪ್ರಮಾಣವು ದೀರ್ಘಕಾಲೀನ ಸರಾಸರಿಗಿಂತ 15% ಕಡಿಮೆಯಿದೆ.

ಈ ಕೊರತೆಯು ಮುಂದುವರಿದರೆ, ಇದು 2009ರ ನಂತರದ ಅತ್ಯಂತ ದುರ್ಬಲ ಮುಂಗಾರು ಆಗಲಿದೆ; ಆಗ ಮಳೆಯ ಪ್ರಮಾಣವು ಸಾಮಾನ್ಯಕ್ಕಿಂತ 18% ಕಡಿಮೆಯಿತ್ತು.

ಹವಾಮಾನ ಇಲಾಖೆಯು ಮೇ ತಿಂಗಳಲ್ಲೇ ಈ ಋತುವಿನಲ್ಲಿ 10% ರಷ್ಟು ಮಳೆಯ ಕೊರತೆಯಾಗಬಹುದು ಎಂದು ಮುನ್ಸೂಚನೆ ನೀಡಿತ್ತು.ಸೆಪ್ಟೆಂಬರ್ನ ಕೊನೆಯ ವಾರದಲ್ಲಿ ಬಂಗಾಳ ಕೊಲ್ಲಿಯಲ್ಲಿ ಉಷ್ಣವಲಯದ ಚಂಡಮಾರುತ ಉಂಟಾಗಲು ಅನುಕೂಲಕರ ಪರಿಸ್ಥಿತಿಗಳು ನಿರ್ಮಾಣವಾಗಬಹುದು ಎಂದು ಆಸ್ಟ್ರೇಲಿಯಾ ಮೂಲದ ಸಲಹಾ ಸಂಸ್ಥೆ ಗ್ಲೋಬಲ್ ವೆದರ್ ಕ್ಲೈಮೇಟ್ ಅನಾಲಿಟಿಕ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಕ್ರಿಶ್ಚಿಯನ್ ವರ್ನರ್ ಹೇಳಿದ್ದಾರೆ.ಇದು ಪೂರ್ವ ಮತ್ತು ಈಶಾನ್ಯ ಭಾರತಕ್ಕೆ ಅತ್ಯಗತ್ಯ ಮಳೆಯನ್ನು ತರುವ ಮೂಲಕ ಅಲ್ಲಿನ ಮಳೆಯ ಕೊರತೆಯನ್ನು ತಗ್ಗಿಸಬಹುದು ಎಂದು ಅವರು ಹೇಳಿದರು.

ಆದಾಗ್ಯೂ, ಈ ಚಂಡಮಾರುತವು ರಾಷ್ಟ್ರಮಟ್ಟದ ಒಟ್ಟಾರೆ ಪರಿಸ್ಥಿತಿಯಲ್ಲಿ ಗಮನಾರ್ಹ ಬದಲಾವಣೆಯನ್ನು ತರುವ ಸಾಧ್ಯತೆಯಿಲ್ಲ ಮತ್ತು ಕಾಲೋಚಿತ ಮಳೆಯ ಕೊರತೆಯು 13% ರಿಂದ 16% ರ ನಡುವೆ ಇರಲಿದೆ ಎಂದು ವರ್ನರ್ ನಿರೀಕ್ಷಿಸುತ್ತಾರೆ. ಹವಾಮಾನ ಮುನ್ಸೂಚನೆಗಾರರು ಮತ್ತು ಶಿಕ್ಷಣ ತಜ್ಞರು ಯುಕೆಯ ಲ್ಯಾಂಕಾಸ್ಟರ್ ವಿಶ್ವವಿದ್ಯಾಲಯದಲ್ಲಿರುವ ಕ್ರೂಷಿಯಲ್ ಎಂಬ ವಿಶೇಷ ಮುನ್ಸೂಚನಾ ವೇದಿಕೆಯ ಮೂಲಕ ಭಾರತದ ಮುಂಗಾರು ಮಳೆಯ ಬಗ್ಗೆ ಅಂದಾಜುಗಳನ್ನು ಮಾಡುತ್ತಿದ್ದಾರೆ.

ಮುಂಗಾರು ಮುಕ್ತಾಯಕ್ಕೆ ಎರಡು ವಾರಗಳಿಗಿಂತ ಕಡಿಮೆ ಸಮಯ ಉಳಿದಿರುವಾಗ, ಈ ಋತುವು 10% ರಿಂದ 20% ರಷ್ಟು ಮಳೆಯ ಕೊರತೆಯೊಂದಿಗೆ ಕೊನೆಗೊಳ್ಳುವ ಸಾಧ್ಯತೆ 68% ರಷ್ಟಿದೆ ಎಂದು ವೇದಿಕೆಯ ಸ್ಥಾಪಕ ಮತ್ತು ಗ್ರಹ ವಿಜ್ಞಾನಿ ಮಾರ್ಕ್ ರೌಲ್‌ಸ್ಟನ್ ತಿಳಿಸಿದ್ದಾರೆ. ಅಕ್ಕಿ, ಸಕ್ಕರೆ ಮತ್ತು ಹತ್ತಿ ಉತ್ಪಾದನೆಯಲ್ಲಿ ವಿಶ್ವದ ಪ್ರಮುಖ ರಾಷ್ಟ್ರಗಳಲ್ಲಿ ಒಂದಾಗಿರುವ ಭಾರತದಲ್ಲಿ, ತಮ್ಮ ಜಮೀನುಗಳಿಗೆ ನೀರಾವರಿಗಾಗಿ ಮಳೆಗಾಲದ ಮಳೆಯನ್ನೇ ಅವಲಂಬಿಸಿರುವ ಕೋಟ್ಯಂತರ ರೈತರಿಗೆ ಸಮರ್ಪಕ ಮುಂಗಾರು ಮಳೆ ಅತ್ಯಗತ್ಯವಾಗಿದೆ. ಭಾರತದ ವಾರ್ಷಿಕ ಮಳೆಯ ಬಹುಪಾಲು ಈ ಮಳೆಗಾಲದಲ್ಲೇ ಲಭ್ಯವಾಗುತ್ತದೆ.

ಮಳೆಯ ಕೊರತೆಯು ದೀರ್ಘಕಾಲ ಮುಂದುವರಿದರೆ, ಅದು ಪ್ರಸ್ತುತ ಬೆಳೆ ಹಾಗೂ ಮುಂದಿನ ಬೆಳೆ ಚಕ್ರದ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು. ಇದು ಈಗಾಗಲೇ ಏರಿಕೆಯಾಗುತ್ತಿರುವ ಆಹಾರ ಪದಾರ್ಥಗಳ ಬೆಲೆಗಳ ಮೇಲಿನ ಒತ್ತಡವನ್ನು ಇನ್ನಷ್ಟು ಹೆಚ್ಚಿಸಬಹುದು; ಆಗಸ್ಟ್‌ನಲ್ಲಿ ಆಹಾರದ ಬೆಲೆಗಳು ಸತತ ಏಳನೇ ತಿಂಗಳಿಗೂ ಏರಿಕೆಯಾಗಿ ಶೇ. 5.95 ರಷ್ಟನ್ನು ತಲುಪಿದ್ದು, ಇದು ಈ ವರ್ಷದ ಗರಿಷ್ಠ ಮಟ್ಟವಾಗಿದೆ.

ಕ್ವಾಂಟ್-ಇಕೋ ಸಂಸ್ಥೆಯ ಅರ್ಥಶಾಸ್ತ್ರಜ್ಞೆ ಯುವಿಕಾ ಸಿಂಘಾಲ್ ಅವರ ಪ್ರಕಾರ, ಮುಂಗಾರು ಮಳೆ ಕೊರತೆಯಾದಾಗ, ಸಾಮಾನ್ಯ ಮಟ್ಟಕ್ಕಿಂತ ಮಳೆಯ ಪ್ರಮಾಣದಲ್ಲಿ ಪ್ರತಿ ಶೇ. 1 ರಷ್ಟು ಕೊರತೆಯು ಆಹಾರ ಹಣದುಬ್ಬರವನ್ನು ಸುಮಾರು 25 ಬೇಸಿಸ್ ಪಾಯಿಂಟ್‌ಗಳಷ್ಟು ಹೆಚ್ಚಿಸುತ್ತದೆ.ಮಳೆಯ ಕೊರತೆ ಮತ್ತು ಬೆಲೆ ಏರಿಕೆಯ

ಭದ್ರಾ ಮೇಲ್ದಂಡೆ ನೀರಿಗಾಗಿ ಹೋರಾಟ ತೀವ್ರ

ಜಗಳೂರು ಶಾಖಾ ಕಾಲುವೆ ಅಕ್ವೆಡಕ್ಟ್ ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ಆಗ್ರಹ

"ಮುಂಜಾನೆಯ ಮೆರಗು"

ಜಗಳೂರು, ಸೆ.18– ಭದ್ರಾ ಮೇಲ್ದಂಡೆ ಯೋಜನೆಯಡಿ ಜಗಳೂರು ಶಾಖಾ ಕಾಲುವೆಗೆ ನೀರು ಹರಿಸುವ ನಿಟ್ಟಿನಲ್ಲಿ ಬಾಕಿ ಇರುವ ಅಕ್ವೆಡಕ್ಟ್ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಭದ್ರಾ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ತೊರಣಗಟ್ಟೆ ತಿಪ್ಪೇಸ್ವಾಮಿ ಎಚ್ಚರಿಸಿದರು.

ತಾಲೂಕಿನ ಕಲ್ಲದೇವರಪುರ ಗ್ರಾಮದ ಶ್ರೀ ಕಲ್ಲೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಶುಕ್ರವಾರ ಭದ್ರಾ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿ ವತಿಯಿಂದ ಆಯೋಜಿಸಿದ್ದ ಮುಂದಿನ ಹೋರಾಟದ ರೂಪುರೇಷೆ ಕುರಿತ ಪೂರ್ವಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು.

ಜಗಳೂರು ತಾಲೂಕಿಗೆ ಭದ್ರಾ ಮೇಲ್ದಂಡೆ ಯೋಜನೆಯ ನೀರು ಹರಿಸಬೇಕೆಂಬುದು ಹಲವು ವರ್ಷಗಳ ಬೇಡಿಕೆಯಾಗಿದೆ. ಯೋಜನೆಯ ಕಾಮಗಾರಿಗಳು ವಿವಿಧ ಹಂತಗಳಲ್ಲಿ ನಡೆಯುತ್ತಿದ್ದರೂ, ಜಗಳೂರು ಶಾಖಾ ಕಾಲುವೆಗೆ ನೀರು ತಲುಪಿಸುವ ವಿಚಾರದಲ್ಲಿ ತಾಂತ್ರಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳು ಎದುರಾಗಿವೆ. ರೈತರು ಒಗ್ಗಟ್ಟಿನಿಂದ ಹೋರಾಟ ನಡೆಸಿದಾಗ ಮಾತ್ರ ಸರ್ಕಾರದ ಗಮನ ಸೆಳೆಯಲು ಸಾಧ್ಯ. ಹೀಗಾಗಿ ನೀರಿಗಾಗಿ ನಡೆಯುತ್ತಿರುವ ಹೋರಾಟವನ್ನು ಇನ್ನಷ್ಟು ಸಂಘಟಿತಗೊಳಿಸಬೇಕು ಎಂದು ಹೇಳಿದರು.



ಹೋರಾಟದ ಫಲವಾಗಿ ಚಿತ್ರದುರ್ಗಕ್ಕೆ ನೀರು: ರಾಜೇಶ್

ಮಾಜಿ ಶಾಸಕ ಹೆಚ್.ಪಿ. ರಾಜೇಶ್ ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆಗಾಗಿ ನಡೆದ ದೀರ್ಘಕಾಲದ ಹೋರಾಟದ ಫಲವಾಗಿ ಚಿತ್ರದುರ್ಗ ಭಾಗಕ್ಕೆ ನೀರು ತಲುಪುವ ಹಂತ ಬಂದಿದೆ. ಆದರೆ ಜಗಳೂರು ತಾಲೂಕಿಗೆ ನೀರು ಹರಿಯಲು ಇನ್ನೂ ಕೆಲವು ತಾಂತ್ರಿಕ ಸಮಸ್ಯೆಗಳಿದ್ದು, ಅವುಗಳನ್ನು ಶೀಘ್ರ ಪರಿಹರಿಸಬೇಕು ಎಂದರು.

ಭದ್ರಾ ಮೇಲ್ದಂಡೆ ಹೋರಾಟದಲ್ಲಿ ತೊರಣಗಟ್ಟೆ ತಿಪ್ಪೇಸ್ವಾಮಿ ಸೇರಿದಂತೆ ಹಲವು ಹೋರಾಟಗಾರರು ಆರಂಭದಿಂದಲೂ ಪ್ರಮುಖ ಪಾತ್ರ ವಹಿಸಿದ್ದಾರೆ. ನಿರಂತರ ಹೋರಾಟದ ಪರಿಣಾಮವಾಗಿ ಯೋಜನೆ ಈ ಹಂತಕ್ಕೆ ತಲುಪಿದೆ ಎಂದು ಹೇಳಿದರು.

ಜಗಳೂರು ತಾಲೂಕಿನಲ್ಲಿ ರೈತರ ಗಮನಕ್ಕೆ ತಾರದೆ ಜಮೀನುಗಳಲ್ಲಿ ಪೈಪ್‌ಲೈನ್ ಕಾಮಗಾರಿ ನಡೆಸಲಾಗುತ್ತಿದೆ ಎಂಬ ದೂರುಗಳಿವೆ. ಈ ಕುರಿತು ರೈತರೊಂದಿಗೆ ಚರ್ಚಿಸಿ ಅವರ ಆತಂಕಗಳನ್ನು ಪರಿಹರಿಸಬೇಕು. ಈಗಾಗಲೇ ಯೋಜನೆಗೆ ಸಂಬಂಧಿಸಿದಂತೆ ತಾಲೂಕಿನಲ್ಲಿ ಸುಮಾರು 1,230 ಕೋಟಿ ಮೊತ್ತದ ಕಾಮಗಾರಿಗಳು ನಡೆದಿವೆ ಎನ್ನಲಾಗುತ್ತಿದ್ದು, ಕಾಮಗಾರಿಗಳ ಪ್ರಗತಿ ಹಾಗೂ ಮುಂದಿನ ಹಂತಗಳ ಕುರಿತು ಸಮಗ್ರ ಚರ್ಚೆ ಅಗತ್ಯವಿದೆ ಎಂದರು.

62 ಗ್ರಾಮಗಳಿಗೆ ನೀರು; ಒಗ್ಗಟ್ಟಿನ ಹೋರಾಟ ಅಗತ್ಯ

ಭದ್ರಾ ಮೇಲ್ದಂಡೆ ಯೋಜನೆಯಿಂದ ಜಗಳೂರು ತಾಲೂಕಿನ ಸುಮಾರು 62 ಗ್ರಾಮಗಳಿಗೆ ಅನುಕೂಲವಾಗಲಿದೆ. ಪ್ರತಿಯೊಂದು ಗ್ರಾಮದಲ್ಲಿಯೂ ಹೋರಾಟ ಸಮಿತಿಗಳನ್ನು ರಚಿಸಿ ರೈತರನ್ನು ಸಂಘಟಿಸುವ ಅಗತ್ಯವಿದೆ ಎಂದು ರಾಜೇಶ್ ಹೇಳಿದರು.

ತಾಲೂಕಿನಲ್ಲಿ ಸುಮಾರು 1.60 ಲಕ್ಷ ಎಕರೆ ಸಾಗುವಳಿ ಭೂಮಿಯಿದ್ದು, ಸಂಪೂರ್ಣ ನೀರಾವರಿ ಸೌಲಭ್ಯ ಕಲ್ಪಿಸಲು ಸುಮಾರು 8 ಟಿಎಂಸಿ ನೀರಿನ ಅಗತ್ಯವಿದೆ. ನೀರು ದೊರೆತರೆ ಕೃಷಿಗೆ ಶಾಶ್ವತ ಬಲ ಸಿಗಲಿದೆ. ನೀರಾವರಿ ಸೌಲಭ್ಯದಿಂದ ಎರಡು ಬೆಳೆ ಬೆಳೆಯುವ ಅವಕಾಶವನ್ನು ಜಗಳೂರು ಭಾಗದಲ್ಲಿಯೂ ಸೃಷ್ಟಿಸಬೇಕು ಎಂದರು.

ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಮಾಡಬೇಕು ಎಂಬುದು ನಮ್ಮ ಬೇಡಿಕೆ–ಯಾಗಿದೆ. ಕೇಂದ್ರದಿಂದ 5,300 ಕೋಟಿ ಅನುದಾನದ ಕುರಿತು ಹಲವು ಬಾರಿ ಚರ್ಚೆಯಾಗಿದ್ದರೂ ಅಗತ್ಯ ಅನುದಾನ ಬಿಡುಗಡೆಯಾಗಿಲ್ಲ ಎಂಬ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಅಗತ್ಯವಿದ್ದರೆ ರೈತರೊಂದಿಗೆ ಬೆಂಗಳೂರಿನವರೆಗೆ ಪಾದಯಾತ್ರೆ ನಡೆಸಲು ಸಿದ್ಧರಿದ್ದೇವೆ ಎಂದು ಹೇಳಿದರು.

ತಾಲೂಕಿನ 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ನಡೆದ ಕಾಮಗಾರಿಗಳಿಂದ ಹಲವು ಕೆರೆಗಳಿಗೆ ನೀರು ದೊರೆತಿದ್ದು, ಇಂತಹ ಶಾಶ್ವತ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಜಗಳೂರಿಗೂ ನೀರು ಬರುವವರೆಗೆ ಹೋರಾಟ: ಎಸ್.ವಿ. ರಾಮಚಂದ್ರ

ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಮಾತನಾಡಿ, ತಾವು ಶಾಸಕರಾಗಿದ್ದ ಅವಧಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಹೆಚ್ಚಿನ ಒತ್ತು ನೀಡಲಾಗಿತ್ತು. ಯೋಜನೆಯಿಂದ ಕ್ಷೇತ್ರದ ಸಂಪೂರ್ಣ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರೆಯದಿದ್ದರೂ ಗಣನೀಯ ಪ್ರಮಾಣದ ಪ್ರದೇಶಕ್ಕೆ ಅನುಕೂಲವಾಗುವ ಸಾಧ್ಯತೆಯಿದೆ ಎಂದರು.

ಚಿತ್ರದುರ್ಗ ತಾಲೂಕಿನ ಗೊನೂರು ಕೆರೆಗೆ ನೀರು ತಲುಪಿರುವುದು ಸಂತಸದ ವಿಚಾರ. ಅದೇ ರೀತಿ ಜಗಳೂರು ತಾಲೂಕಿಗೂ ನೀರು ಹರಿಯಬೇಕು. ಜಗಳೂರಿಗೆ ನೀರು ತಲುಪುವವರೆಗೆ ರೈತರ ಹೋರಾಟಕ್ಕೆ ತಮ್ಮ ಬೆಂಬಲ ಮುಂದುವರಿಯಲಿದೆ ಎಂದು ಹೇಳಿದರು.

ರಾಜಕಾರಣಿಗಳಿಂದ ಮಾತ್ರ ಯೋಜನೆ ಸಾಕಾರವಾಗದು: ಗುರುಮೂರ್ತಿ

ಹಿರಿಯ ಪತ್ರಕರ್ತ ಹಾಗೂ ಹೋರಾಟಗಾರ ದೊಣೆಹಳ್ಳಿ ಗುರುಮೂರ್ತಿ ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆಗಾಗಿ ಹಲವು ದಶಕಗಳಿಂದ ಹೋರಾಟ ನಡೆಯುತ್ತಿದೆ. ರಾಜಕಾರಣಿಗಳ ಪ್ರಯತ್ನದಿಂದ ಮಾತ್ರ ಇಂತಹ ಬೃಹತ್ ಯೋಜನೆಗಳು ಸಾಕಾರವಾಗುವುದಿಲ್ಲ. ರೈತರು, ವಿವಿಧ ಸಂಘಟನೆಗಳು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಹೋರಾಟ ನಡೆಸಿದಾಗ ಸರ್ಕಾರದ ಮೇಲೆ ಒತ್ತಡ ತರಲು ಸಾಧ್ಯ ಎಂದರು.

2008ರಲ್ಲಿ ಹೋರಾಟ ಸಮಿತಿ ವತಿಯಿಂದ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿತ್ತು. ಹೋರಾಟದ ವಿವಿಧ ಹಂತಗಳ ಮೂಲಕ ಜಗಳೂರು ಭಾಗದ ನೀರಿನ ಹಕ್ಕಿನ ವಿಚಾರವನ್ನು ಮುಂದಿಟ್ಟುಕೊಳ್ಳಲು ಸಾಧ್ಯವಾಯಿತು ಎಂದು ಹೇಳಿದರು.

62 ಗ್ರಾಮಗಳಿಗೆ ನೀರು ದೊರೆಯುವ ಉದ್ದೇಶ ಹೊಂದಿರುವ ಯೋಜನೆಯಿಂದಾಗಿ ರೈತರು ಭದ್ರಾ ಮೇಲ್ದಂಡೆ ಯೋಜನೆಗಾಗಿ ಹಲವು ದಶಕಗಳಿಂದ ಗ್ರಾಮದಿಂದ ಗ್ರಾಮಕ್ಕೆ ಸಮಿತಿಗಳನ್ನು ರಚಿಸಿ ಹೋರಾಟ ನಡೆಯುತ್ತಿದೆ. ರಾಜಕಾರಣಿಗಳ ರೈತರನ್ನು ಸಂಘಟಿಸಬೇಕು. ಮುಂದಿನ ಪ್ರಯತ್ನದಿಂದ ಮಾತ್ರ ಇಂತಹ ಬೃಹತ್ ಹೋರಾಟದ ರೂಪುರೇಷೆಯನ್ನು ಯೋಜನೆಗಳು ಸಾಕಾರವಾಗುವುದಿಲ್ಲ. ಪರಿಣಾಮಕಾರಿಯಾಗಿ ಸಿದ್ಧಪಡಿಸಬೇಕು ರೈತರು, ವಿವಿಧ ಸಂಘಟನೆಗಳು ಹಾಗೂ ಎಂದರು.

18 ವರ್ಷವಾದರೂ ಕಾಮಗಾರಿ ಪೂರ್ಣವಾಗಿಲ್ಲ: ಯಾದವರೆಡ್ಡಿ

ಹೋರಾಟಗಾರ ಯಾದವರೆಡ್ಡಿ ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆ ಆರಂಭವಾಗಿ ಸುಮಾರು 18 ವರ್ಷ ಕಳೆದರೂ ಕಾಮಗಾರಿ



ಸಂಪೂರ್ಣಗೊಂಡಿಲ್ಲ. ಯೋಜನೆಗೆ ಫಲವಾಗಿ ಚಿತ್ರದುರ್ಗ ಶಾಖಾ ಕಾಲುವೆ ಸಾವಿರಾರು ಕೋಟಿ ರೂಪಾಯಿ ಮೂಲಕ ಗೊನೂರು ಕೆರೆಗೆ ನೀರು ವೆಚ್ಚವಾಗಿದ್ದರೂ ನಿರೀಕ್ಷಿತ ವೇಗದಲ್ಲಿ ತಲುಪುವಂತಾಗಿದೆ ಎಂದರು. ಕಾಮಗಾರಿ ನಡೆಯುತ್ತಿಲ್ಲ ಎಂಬುದು ರೈತರ ಅಸಮಾಧಾನಕ್ಕೆ ಕಾರಣವಾಗಿದೆ ಎಂದರು.

ಹಲವು ಹಂತಗಳಲ್ಲಿ ಹೋರಾಟ ನಡೆಸಿ ಯೋಜನೆಯ ವ್ಯಾಪ್ತಿಗೆ ಪ್ರದೇಶಗಳನ್ನು ಸೇರಿಸಿಕೊಳ್ಳಲಾಗಿದೆ. ನ್ಯಾಯಾಲಯದ ಮೊರೆ ಹೋಗಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ ಬಳಿಕ ನೀರು ಒದಗಿಸುವಂತೆ ಆದೇಶ ದೊ–ರೆತಿದ್ದು, ಅದರ ಪರಿಣಾಮವಾಗಿ ನೀರು ಹರಿಯುವಂತಾಗಿದೆ ಎಂದು ಹೇಳಿದರು.

ಡಿಪಿಆರ್‌ನಲ್ಲಿ ನಿಗದಿಪಡಿಸಿರುವಂತೆ ಕಾಮಗಾರಿ ನಡೆಯುತ್ತಿದೆಯೇ ಎಂಬುದನ್ನು ಸರ್ಕಾರ ಪರಿಶೀಲಿಸಬೇಕು. ಯೋಜನೆಯ ಮೂಲ ಉದ್ದೇಶದಂತೆ ಎಲ್ಲ ಪ್ರದೇಶಗಳಿಗೂ ನೀರು ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜಗಳೂರು ಶಾಖಾ ಕಾಲುವೆಗೆ ಸಂಬಂಧಿಸಿದಂತೆ ಮುದ್ದಾಪುರ ಹಾಗೂ ಎಳಗೋಡು ಪ್ರದೇಶಗಳನ್ನು ಒಳಪಡಿಸಿರುವ ವಿಚಾರವೂ ಚರ್ಚೆಗೆ ಬಂದಿದೆ. ಕೇಂದ್ರ ಸರ್ಕಾರದಿಂದ ಅಗತ್ಯ ಅನುದಾನ ಬಿಡುಗಡೆ ಮಾಡಿಸುವ ನಿಟ್ಟಿನಲ್ಲಿ ರಾಜ್ಯದ ಸಂಸದರು ಧ್ವನಿ ಎತ್ತಬೇಕು. ಜಗಳೂರು ತಾಲೂಕಿಗೆ ನೀರು ಹರಿಸುವ ವಿಚಾರದಲ್ಲಿ ರೈತರ ಹೋರಾಟ ಅನಿವಾರ್ಯವಾಗಿದೆ ಎಂದರು.

ರೈತರು ಒಗ್ಗಟ್ಟಿನಿಂದ ಹೋರಾಡಬೇಕು: ಓವಳೇಶ್

ಹೋರಾಟ ಸಮಿತಿ ಕಾರ್ಯದರ್ಶಿ ಆರ್. ಓವಳೇಶ್ ಮಾತನಾಡಿ, ಜಗಳೂರು ಭಾಗಕ್ಕೆ ನೀರು ಹರಿಸಬೇಕೆಂಬ ಬೇಡಿಕೆಯೊಂದಿಗೆ ಕಳೆದ ಮೂರು ದಶಕಗಳಿಂದ ಹೋರಾಟ ನಡೆಯುತ್ತಿದೆ. ನಿರಂತರ ಹೋರಾಟದ ಫಲವಾಗಿ ಚಿತ್ರದುರ್ಗ ಶಾಖಾ ಕಾಲುವೆ ಮೂಲಕ ಗೊನೂರು ಕೆರೆಗೆ ನೀರು ತಲುಪುವಂತಾಗಿದೆ ಎಂದರು.

ಇದೀಗ ಜಗಳೂರು ತಾಲೂಕಿಗೆ ನೀರು ಹರಿಸುವ ವಿಚಾರದಲ್ಲಿ ನಿರ್ಣಾಯಕ ಹೋರಾಟದ ಅಗತ್ಯವಿದೆ. ರೈತರು ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು. ಶಾಶ್ವತ ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಬೇಕು ಹಾಗೂ ಕೇಂದ್ರ ಸರ್ಕಾರದ ಘೋಷಿತ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಕಲ್ಲೇಶ್ವರ ದೇವಾಲಯ ಸಮಿತಿ ಅಧ್ಯಕ್ಷ ಶರಣಪ್ಪ, ರೈತ ಸಂಘದ ತಾಲೂಕು ಅಧ್ಯಕ್ಷ ಕುಮಾರ, ಕೆ.ಬಿ. ಬಡಯ್ಯ, ತಿಪ್ಪೇಸ್ವಾಮಿ, ಮಹಾಲಿಂಗಪ್ಪ, ಇಂದಿರಮ್ಮ, ವೀರಸ್ವಾಮಿ, ಕೃಷ್ಣಮೂರ್ತಿ ಸೇರಿದಂತೆ ಭದ್ರಾ ಮೇಲ್ದಂಡೆ ಹೋರಾಟ ಸಮಿತಿ ಹಾಗೂ ವಿವಿಧ ರೈತ ಸಂಘಟನೆಗಳ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಗರ್ಭಿಣಿ–ಬಾಣಂತಿಯರ ಆರೋಗ್ಯಕ್ಕೆ ಪೌಷ್ಟಿಕ ಆಹಾರ ಮುಖ್ಯ: ಜಾಗೃತಿ

ಬಸವನಕೋಟೆ ವಲಯದಲ್ಲಿ ಪೋಷಣ್ ಅಭಿಯಾನ ಕಾರ್ಯಕ್ರಮ

"ಮುಂಜಾನೆಯ ಮೆರಗು"

ಜಗಳೂರು, ಸೆ.18– ಗರ್ಭಿಣಿಯರು ಹಾಗೂ ಬಾಣಂತಿಯರು ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದರ ಜೊತೆಗೆ, ಪೌಷ್ಟಿಕಾಂಶಯುಕ್ತ ಆಹಾರ ಸೇವನೆ ಮತ್ತು ನಿಯಮಿತ ಆರೋಗ್ಯ ತಪಾಸಣೆಗೆ ಆದ್ಯತೆ ನೀಡಬೇಕು ಎಂದು ಅಂಗನವಾಡಿ ಮೇಲ್ವಿಚಾರಕಿ ಶಶಿಕಲಾ ಸಲಹೆ ನೀಡಿದರು.

ತಾಲ್ಲೂಕಿನ ಬಸವನಕೋಟೆ ವಲಯದ ಹೊಸಕೆರೆ ಹೊಸೂರು ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಶುಕ್ರವಾರ ಆಯೋಜಿಸಿದ್ದ ಪೋಷಣ್ ಅಭಿಯಾನದ ಅಂಗವಾಗಿ ಗರ್ಭಿಣಿಯರ ಸೀಮಂತ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗರ್ಭಾವಸ್ಥೆಯ ಅವಧಿಯಲ್ಲಿ ತಾಯಿ ಹಾಗೂ ಮಗುವಿನ ಆರೋಗ್ಯದ ಮೇಲೆ ವಿಶೇಷ ಗಮನ ಹರಿಸುವುದು ಅಗತ್ಯ. ಸರ್ಕಾರ ಗರ್ಭಿಣಿಯರು ಮತ್ತು ಬಾಣಂ–ತಿಯರ ಆರೋಗ್ಯ ರಕ್ಷಣೆಗಾಗಿ ಹಲವು ಯೋಜನೆಗಳು ಹಾಗೂ ಸೌಲಭ್ಯಗಳನ್ನು ಜಾರಿಗೊಳಿಸಿದೆ. ಅರ್ಹ ಫಲಾನುಭವಿಗಳು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಗರ್ಭಿಣಿಯರು ವೈದ್ಯರು ಹಾಗೂ ಆರೋಗ್ಯ ಕಾರ್ಯಕರ್ತರ ಸಲಹೆಯಂತೆ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ದೇಹಕ್ಕೆ ಅಗತ್ಯವಿರುವ ಕಬ್ಬಿಣಾಂಶ, ಕ್ಯಾಲ್ಸಿಯಂ, ಪ್ರೋಟೀನ್ ಸೇರಿದಂತೆ ವಿವಿಧ ಪೌಷ್ಟಿಕಾಂಶಗಳನ್ನು ಒಳಗೊಂಡ ಸಮತೋಲನ ಆಹಾರ ಸೇವಿಸಬೇಕು. ಇದರಿಂದ ತಾಯಿಯ ಆರೋಗ್ಯ ಕಾಪಾಡಿಕೊಳ್ಳುವುದರ ಜೊತೆಗೆ ಮಗುವಿನ ಬೆಳವಣಿಗೆಗೂ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಮೇಲ್ವಿಚಾರಕಿ ಶಾಂತಮ್ಮ ಮಾತನಾಡಿ, ಅಂಗನವಾಡಿ ಕೇಂದ್ರಗಳ ಮೂಲಕ ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳ ಪೌಷ್ಟಿಕತೆ ಮತ್ತು ಆರೋಗ್ಯದ ಕುರಿತು ನಿರಂತರವಾಗಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳಲ್ಲಿ



ಪೋಷಣ್ ಅಭಿಯಾನದಡಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯದ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಲಾಗುತ್ತಿದೆ ಎಂದರು.

ಸೀಮಂತ ಕಾರ್ಯಕ್ರಮವು ಗರ್ಭಿಣಿಯರಲ್ಲಿ ಸಂತಸ ಹಾಗೂ ಆತ್ಮವಿಶ್ವಾಸ ಮೂಡಿಸುವುದರ ಜೊತೆಗೆ, ಗರ್ಭಾವಸ್ಥೆಯಲ್ಲಿ ಕುಟುಂಬ ಮತ್ತು ಸಮಾಜ ವಹಿಸಬೇಕಾದ ಜವಾಬ್ದಾರಿಯ ಕುರಿತು ಅರಿವು ಮೂಡಿಸುವ ಉದ್ದೇಶ ಹೊಂದಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಐ–ಟಿಯುಸಿ ಮುಖಂಡರಾದ ಮಾದಿಹಳ್ಳಿ ಮಂಜುನಾಥ್, ತಿಪ್ಪೇಸ್ವಾಮಿ, ಅಂಗನವಾಡಿ ಕಾರ್ಯಕರ್ತೆಯರಾದ ಹಾಲಮ್ಮ, ಸುಧಾ, ಮಂಜಮ್ಮ, ಗೌರಮ್ಮ, ಗಾಯತ್ರಮ್ಮ, ಶಾಂತ ಸೇರಿದಂತೆ ವಿವಿಧ ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆಯರು ಹಾಗೂ ಗರ್ಭಿಣಿಯರು ಭಾಗವಹಿಸಿದ್ದರು.

ಬರಪೀಡಿತ ತಾಲೂಕು ಘೋಷಣೆಗೆ ಆಗ್ರಹಿಸಿ ರೈತರ ಪ್ರತಿಭಟನೆ ಮುಂದುವರಿಕೆ

"ಮುಂಜಾನೆಯ ಮೆರಗು"

ಜಗಳೂರು, ಸೆ.18– ಜಗಳೂರು ತಾಲೂಕನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಹುಚ್ಚವ್ವನಹಳ್ಳಿ ಮಂಜುನಾಥ್ ಬಣ) ತಾಲೂಕು ಘಟಕದ ವತಿಯಿಂದ ಆರಂಭಿಸಿರುವ ಪ್ರತಿಭಟನೆ ಎರಡನೇ ದಿನವೂ ಮುಂದುವರಿಯಿತು.



ಪಟ್ಟಣದ ಪ್ರತಿಭಟನಾ ಸ್ಥಳದಲ್ಲಿ ಶುಕ್ರವಾರವೂ ರೈತರು ಅಡುಗೆ ಮಾಡಿಕೊಂಡು ಊಟ ಮಾಡುವ ಮೂಲಕ ಸರ್ಕಾರದ ಗಮನ ಸೆಳೆದರು. ತಾಲೂಕಿನಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ತೀವ್ರವಾಗಿ ಕುಂಠಿತಗೊಂಡಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಜಗಳೂರನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸದೇ ಇರುವುದು ರೈತರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕಾನನಕಟ್ಟೆ ತಿಪ್ಪೇಸ್ವಾಮಿ, ತಾಲೂಕಿನಲ್ಲಿ ಮಳೆ ಕೊರತೆಯಿಂದ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಬರಪೀಡಿತ ತಾಲೂಕು ಘೋಷಣೆಗೆ ಅಗತ್ಯ ಕ್ರಮ ಕೈಗೊಂಡು ರೈತರಿಗೆ ಸೂಕ್ತ ಪರಿಹಾರ ಹಾಗೂ ನೆರವು ಒದಗಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ಅಧ್ಯಕ್ಷ ಚಿಕ್ಕಮಲ್ಲನವಳ್ಳಿ ಚಿರಂಜೀವಿ ಮಾತನಾಡಿ, ಜಗಳೂರು ತಾಲೂಕಿನಲ್ಲಿ ಕೃಷಿಯನ್ನೇ ಅವಲಂಬಿಸಿರುವ ಸಾವಿರಾರು ರೈತರು ಮಳೆ ಕೈಕೊಟ್ಟಿರುವುದರಿಂದ ಸಂಕಷ್ಟದಲ್ಲಿದ್ದಾರೆ. ಎರಡು ಪಟ್ಟಿಗಳಲ್ಲಿಯೂ ತಾಲೂಕು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಯಾಗದಿರುವುದು ರೈತರಲ್ಲಿ ಬೇಸರ ಮೂಡಿಸಿದೆ. ಸರ್ಕಾರ ಕೂಡಲೇ ತಾಲೂಕನ್ನು ಬರಪೀಡಿತ ಎಂದು ಘೋಷಿಸಿ ರೈತರಿಗೆ ಬೆಳೆ ನಷ್ಟ ಪರಿಹಾರ, ಬೆಳೆ ವಿಮೆ ಹಾಗೂ ಅಗತ್ಯ ನೆರವು ನೀಡಬೇಕು ಎಂದು ಆಗ್ರಹಿಸಿದರು.

ತಾಲೂಕು ಪ್ರಧಾನ ಕಾರ್ಯದರ್ಶಿ ರಾಜನಟ್ಟಿ ರಾಜು ಮಾತನಾಡಿ, ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು. ಬರದ ತೀವ್ರತೆಯನ್ನು ಪರಿಗಣಿಸಿ ಜಗಳೂರನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸುವವರೆಗೆ ಹೋರಾಟ ಮುಂದುವರಿಸಲ